ಸಂಪುಟ: 11 ಸಂಚಿಕೆ: 154 ಪುಟ: 4+2 ಬೆಲೆ: 3.00 ಬುಧವಾರ ಜುಲೈ 22, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 154 Pages : 4+2 Rate : 3.00 Wednesday July 22, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಜು.24ರಂದು ಗದಗದಲ್ಲಿ ಉದ್ಯೋಗ ಮೇಳ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಜುಲೈ 24ರಂದು ಬೆಳಿಗ್ಗೆ 10 ಗಂಟೆಗೆ ಗದಗದ ಜಿಲ್ಲಾ ಆಡಳಿತ ಭವನದ 2ನೇ ಮಹಡಿಯಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ನೇರ ಉದ್ಯೋಗ ಸಂದರ್ಶನ (ಜಾಬ್ ಡ್ರೈವ್) ಹಮ್ಮಿಕೊಳ್ಳಲಾಗಿದೆ. ನೇರ ಸಂದರ್ಶನದಲ್ಲಿ ಟಾಟಾ ಎಲೆಕ್ಟ್ರಾನಿಕ್ಸ್ ಪ್ರೈವೇಟ್ ಲಿಮಿಟೆಡ್, ಬೆಂಗಳೂರು ಹಾಗೂ ಟಾಟಾ ಮೋಟರ್ಸ್ ಲಿಮಿಟೆಡ್, ಧಾರವಾಡ ಕಂಪನಿಗಳು ಭಾಗವಹಿಸಲಿವೆ. ಟಾಟಾ ಎಲೆಕ್ಟ್ರಾನಿಕ್ಸ್‌ನಲ್ಲಿ ಆಪರೇಟರ್, ಕ್ವಾಲಿಟಿ ಚೆಕಿಂಗ್, ಅಸೆಂಬ್ಲರ್ ಹಾಗೂ ಮ್ಯಾನುಫ್ಯಾಕ್ಚರಿಂಗ್ ಯುನಿಟ್ ಹುದ್ದೆಗಳಿಗೆ ನೇಮಕ ನಡೆಯಲಿದ್ದು, ಪಿಯುಸಿ, ಡಿಪ್ಲೊಮಾ ಹಾಗೂ ಯಾವುದೇ ಪದವೀಧರರು ಅರ್ಜಿ ಸಲ್ಲಿಸಬಹುದು. ಅಭ್ಯರ್ಥಿಗಳ ವಯೋಮಿತಿ 18 ರಿಂದ 26 ವರ್ಷ ನಿಗದಿಪಡಿಸಲಾಗಿದೆ. ಆಯ್ಕೆಯಾದವರಿಗೆ ಬೆಂಗಳೂರು ಕೆಲಸದ ಸ್ಥಳವಾಗಿರಲಿದೆ. ಟಾಟಾ ಮೋಟರ್ಸ್ ಲಿಮಿಟೆಡ್‌ನಲ್ಲಿ ಅಪ್ರೆಂಟಿಸ್ ಹುದ್ದೆಗಳಿಗೆ ನೇಮಕ ನಡೆಯಲಿದ್ದು, ಪಿಯುಸಿ ಹಾಗೂ ಐಟಿಐ ವಿದ್ಯಾರ್ಹತೆ ಹೊಂದಿರುವ 18ರಿಂದ 23 ವರ್ಷದೊಳಗಿನ ಅಭ್ಯರ್ಥಿಗಳು ಭಾಗವಹಿಸಬಹುದು. ಕೆಲಸದ ಸ್ಥಳ ಧಾರವಾಡ ಆಗಿರಲಿದೆ. ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝೆರಾಕ್ಸ್ ಪ್ರತಿಗಳು, ಎರಡು ಬಯೋಡಾಟಾ (ರೆಸ್ಯೂಮ್), ಆಧಾರ್ ಕಾರ್ಡ್‌ನ ಝೆರಾಕ್ಸ್ ಪ್ರತಿಯೊಂದಿಗೆ ಸಂದರ್ಶನಕ್ಕೆ ಹಾಜರಾಗಬೇಕು. ಸಂದರ್ಶನದ ದಿನವೇ ನೋಂದಣಿ ಕಡ್ಡಾಯವಾಗಿರುತ್ತದೆ.

ಯುವನಿಧಿ ಯೋಜನೆಯ ಫಲಾನುಭವಿಗಳು ಈ ನೇರ ಸಂದರ್ಶನದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಬೇಕು ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ್ ಪಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಶೈಕ್ಷಣಿಕ ಸಾಲಿನ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನಕ್ಕಾಗಿ ಪರಿಶಿಷ್ಟ ಜಾತಿ (ಎಸ್‌ಸಿ) ಹಾಗೂ ಪರಿಶಿಷ್ಟ ಪಂಗಡ (ಎಸ್‌ಟಿ) ವಿದ್ಯಾರ್ಥಿಗಳಿಂದ ಆನ್‌ಲೈನ್ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಎಸ್‌ಎಸ್‌ಪಿ ತಂತ್ರಾಂಶದ ಮೂಲಕ 1ನೇ ತರಗತಿಯಿಂದ 10ನೇ ತರಗತಿಯವರೆಗಿನ ಹೊಸ ವಿದ್ಯಾರ್ಥಿಗಳು ವಿದ್ಯಾರ್ಥಿವೇತನಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ. ಈಗಾಗಲೇ ಹಿಂದಿನ ತರಗತಿಯಲ್ಲಿ ವಿದ್ಯಾರ್ಥಿವೇತನ ಪಡೆದಿರುವವರು ತಮ್ಮ ಅರ್ಜಿಯನ್ನು ನವೀಕರಣ ಮಾಡಿಕೊಳ್ಳಲು ಸಹ ಅವಕಾಶ ಕಲ್ಪಿಸಲಾಗಿದೆ. ಅರ್ಹ ವಿದ್ಯಾರ್ಥಿಗಳು ಎಸ್‌ಎಸ್‌ಪಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸಿ ವಿದ್ಯಾರ್ಥಿವೇತನದ ಸೌಲಭ್ಯ ಪಡೆಯುವಂತೆ ಸಮಾಜ ಕಲ್ಯಾಣ ಇಲಾಖೆ ಮನವಿ ಮಾಡಿದೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆ, ಗದಗ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು (ಗ್ರೇಡ್-1) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಎಸ್‌ಐಆರ್: 9.02 ಲಕ್ಷ ಫಾರ್ಮ್ ವಿತರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ಚುರುಕುಗೊಂಡಿದ್ದು, ಜುಲೈ 20ರ ವೇಳೆಗೆ ಜಿಲ್ಲೆಯ ಎಲ್ಲ 9,02,947 ಮತದಾರರಿಗೆ ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸುವ ಕಾರ್ಯ ಪೂರ್ಣಗೊಂಡಿದೆ. ಜಿಲ್ಲೆಯಲ್ಲಿ ಒಟ್ಟು 9,02, 947 ಮತದಾರರು ಹಾಗೂ 967 ಮತಗಟ್ಟೆಗಳು ಇವೆ. ಭಾರತೀಯ ಚುನಾವಣಾ ಆಯೋಗದ ನಿರ್ದೇಶನದಂತೆ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ ಮನೆಗೆ ತೆರಳಿ ಎನ್ಯುಮರೇಷನ್ ಫಾರ್ಮ್ ವಿತರಿಸುತ್ತಿದ್ದು, ಈ ಪ್ರಕ್ರಿಯೆಯನ್ನು ಆಗಸ್ಟ್ 8ರವರೆಗೆ ಮುಂದುವರಿಸಲು ಅವಕಾಶ ನೀಡಲಾಗಿದೆ. ಈವರೆಗೆ ವಿತರಿಸಲಾದ ಫಾರ್ಮ್‌ಗಳಲ್ಲಿ 6,73,293 ಎನ್ಯುಮರೇಷನ್ ಫಾರ್ಮ್‌ಗಳ ಡಿಜಿಟಲೀಕರಣ ಕಾರ್ಯವೂ ಪೂರ್ಣಗೊಂಡಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

### ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಿಎಸ್‌ಆರ್ ನಿಧಿ ಬಳಸಿ | ಜಿಲ್ಲೆಯಲ್ಲಿ 37 ಹೊಸ ಕೆಪಿಎಸ್ ಶಾಲೆಗಳ ಯೋಜನೆಗೆ ಡಿಸಿ ಸಿ.ಎನ್. ಶ್ರೀಧರ್ ಕರೆ

# ದೇವಸ್ಥಾನಕ್ಕಿಂತ ಶಾಲೆ ಕಟ್ಟಿದರೆ ಸಮಾಜ ಬೆಳೆಯುತ್ತದೆ

**ವಿಜಯಸಾಕ್ಷಿ ಸುದ್ದಿ, ಗದಗ**

ಒಂದು ದೊಡ್ಡ ದೇವಸ್ಥಾನ ಕಟ್ಟುವುದಕ್ಕಿಂತ 10 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು (ಕೆಪಿಎಸ್) ನಿರ್ಮಿಸಿ. ಮಕ್ಕಳಿಗೆ ನೀಡುವ ಉತ್ತಮ ಶಿಕ್ಷಣವೇ ಸಮಾಜಕ್ಕೆ ನೀಡಬಹುದಾದ ಅತ್ಯುತ್ತಮ ಕೊಡುಗೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಉದ್ಯಮಿಗಳು ಹಾಗೂ ಕಾರ್ಪೊರೇಟ್ ಸಂಸ್ಥೆಗಳಿಗೆ ಮನವಿ ಮಾಡಿದರು.

ಸರ್ಕಾರಿ ಶಾಲೆಗಳ ಗುಣಮಟ್ಟ ಹೆಚ್ಚಿಸಿ, ಖಾಸಗಿ ಶಾಲೆಗಳಿಗೆ ಸಮಾನವಾಗಿ ರೂಪಿಸುವ ಉದ್ದೇಶದಿಂದ ಜಿಲ್ಲೆಯ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಅಭಿವೃದ್ಧಿಪಡಿಸಲು ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ನಿಧಿಯನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳುವಂತೆ ಅವರು ಕರೆ ನೀಡಿದರು.

ನಗರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಆಯೋಜಿಸಿದ್ದ ಸಿಎಸ್‌ಆರ್ ಸಮನ್ವಯ ಸಭೆಯಲ್ಲಿ ಮಾತನಾಡಿದ ಅವರು, ಗ್ರಾಮೀಣ ಹಾಗೂ ಬಡ ಕುಟುಂಬಗಳ ಮಕ್ಕಳಿಗೆ ಎಲ್‌ಕೆಜಿಯಿಂದ ದ್ವಿತೀಯ ಪಿಯುಸಿವರೆಗೆ ಒಂದೇ ಸೂರಿನಡಿ ಗುಣಮಟ್ಟದ ಉಚಿತ ಶಿಕ್ಷಣ ಒದಗಿಸುವುದು ಸರ್ಕಾರದ ಮಹತ್ವಾಕಾಂಕ್ಷೆಯ ಯೋಜನೆಯಾಗಿದೆ ಎಂದರು.

ಜಿಲ್ಲೆಯಲ್ಲಿ ಈಗಾಗಲೇ 20 ಕರ್ನಾಟಕ ಪಬ್ಲಿಕ್ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, ಉಳಿದ



ಸುಮಾರು 700ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳನ್ನು ಕ್ಲಸ್ಟರ್ ಮಾದರಿಯಲ್ಲಿ ಸಂಯೋಜಿಸಿ 37 ಹೊಸ ಕೆಪಿಎಸ್ ಶಾಲೆಗಳನ್ನು ಆರಂಭಿಸಲು ಯೋಜನೆ ರೂಪಿಸಲಾಗಿದೆ ಎಂದು ತಿಳಿಸಿದರು.

ಖಾಸಗಿ ಶಾಲೆಗಳಲ್ಲಿ ಮಕ್ಕಳ ಶಿಕ್ಷಣಕ್ಕಾಗಿ ಸಾವಿರಾರು ರೂಪಾಯಿ ವೆಚ್ಚ ಮಾಡಲು ಸಾಧ್ಯವಾಗದ ಬಡ ಹಾಗೂ ಮಧ್ಯಮ ವರ್ಗದ ಕುಟುಂಬಗಳಿಗೆ ಗುಣಮಟ್ಟದ ಶಿಕ್ಷಣ ಉಚಿತವಾಗಿ ದೊರೆಯುವಂತೆ ಮಾಡುವುದೇ ಈ ಯೋಜನೆಯ ಉದ್ದೇಶವಾಗಿದೆ ಎಂದು ಹೇಳಿದರು.

ಕಾರ್ಪೊರೇಟ್ ಸಂಸ್ಥೆಗಳು ತಮ್ಮ ಸಿಎಸ್‌ಆರ್ ನಿಧಿಯನ್ನು ಕೇವಲ ಸಣ್ಣಪುಟ್ಟ ಕಾಮಗಾರಿಗಳಿಗೆ ಸೀಮಿತಗೊಳಿಸದೆ, ಶಾಲಾ ಕಟ್ಟಡ, ಸ್ಮಾರ್ಟ್ ಕ್ಲಾಸ್ ರೂಮ್, ಕಂಪ್ಯೂಟರ್ ಲ್ಯಾಬ್, ಗ್ರಂಥಾಲಯ, ಬಸ್ ಸೌಲಭ್ಯ, ಶೌಚಾಲಯ ನಿರ್ಮಾಣ ಹಾಗೂ ಶಿಕ್ಷಕರ ವೇತನ ಸೇರಿದಂತೆ ಶಿಕ್ಷಣ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ವಿನಿಯೋಗಿಸಬೇಕು ಎಂದು ಮನವಿ ಮಾಡಿದರು. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ

> ಒಂದು ದೊಡ್ಡ ದೇವಸ್ಥಾನ ಕಟ್ಟುವುದಕ್ಕಿಂತ 10 ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಕಟ್ಟಬೇಕು. ಮಕ್ಕಳಿಗೆ ನೀಡುವ ಉತ್ತಮ ಶಿಕ್ಷಣವೇ ಸಮಾಜಕ್ಕೆ ನೀಡಬಹುದಾದ ಅತ್ಯುತ್ತಮ ಕೊಡುಗೆ.
>
> **- ಸಿ.ಎನ್. ಶ್ರೀಧರ್**, ಜಿಲ್ಲಾಧಿಕಾರಿ

ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಜಿಲ್ಲೆಯ ಕೆಪಿಎಸ್ ಶಾಲೆಗಳಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಫಲಿತಾಂಶ ಶೇ.80ರಿಂದ 90ಕ್ಕೂ ಅಧಿಕ ದಾಖಲಾಗುತ್ತಿದ್ದು, ಇನ್ನೂ 37 ಕೆಪಿಎಸ್ ಶಾಲೆಗಳ ಅಭಿವೃದ್ಧಿಗೆ ಅಗತ್ಯವಿರುವ ಮೂಲಸೌಕರ್ಯದ ವಿವರಗಳನ್ನು ಸಿದ್ಧಪಡಿಸಲಾಗಿದೆ ಎಂದರು. ಪ್ರತಿಯೊಂದು ಶಾಲೆಗೆ ಅಗತ್ಯವಿರುವ ಕೊಠಡಿಗಳು, ಸ್ಮಾರ್ಟ್ ಕ್ಲಾಸ್‌ರೂಮ್, ಪ್ರಯೋಗಾಲಯ, ಸಾರಿಗೆ ಸೇರಿದಂತೆ ವಿವಿಧ ಸೌಲಭ್ಯಗಳ ಪಟ್ಟಿಯನ್ನು ಸಿದ್ಧಪಡಿಸಿ, ಕಂಪನಿಗಳಿಗೆ ಕಳುಹಿಸಿ ಸಿಎಸ್‌ಆರ್ ನೆರವು ಪಡೆಯಲು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ, ಡಾ. ಶರಣು ಗೋಗೇರಿ, ವಿವಿಧ ಉದ್ಯಮಿಗಳು ಹಾಗೂ ಕಾರ್ಪೊರೇಟ್ ಸಂಸ್ಥೆಗಳ ಪ್ರತಿನಿಧಿಗಳು ಉಪಸ್ಥಿತರಿದ್ದರು.

### ಗಜೇಂದ್ರಗಡ ಕಾರ್ಯಕ್ರಮಕ್ಕೆ ಭದ್ರತೆ, ಶಿಷ್ಟಾಚಾರ ಮತ್ತು ಮೂಲಸೌಕರ್ಯ ಕಲ್ಪಿಸಲು ಡಿಸಿ ನಿರ್ದೇಶನ

# ಶಿಷ್ಟಾಚಾರ ಪಾಲನೆಯಲ್ಲಿ ನಿರ್ಲಕ್ಷ್ಯ ಸಹಿಸುವುದಿಲ್ಲ



**ವಿಜಯಸಾಕ್ಷಿ ಸುದ್ದಿ, ಗದಗ**

ರಾಜ್ಯಪಾಲರ ಪ್ರವಾಸದ ವೇಳೆ ಶಿಷ್ಟಾಚಾರ ಪಾಲನೆಯಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ನಡೆಯಬಾರದು. ಅಧಿಕಾರಿಗಳಿಗೆ ವಹಿಸಲಾದ ಜವಾಬ್ದಾರಿಗಳನ್ನು ಅತ್ಯಂತ ಹೊಣೆಗಾರಿಕೆಯಿಂದ ನಿರ್ವಹಿಸಬೇಕು. ಯಾವುದೇ ಅವ್ಯವಸ್ಥೆ ಅಥವಾ ಲೋಪ ಕಂಡುಬಂದರೆ ಸಹಿಸಲಾಗುವುದಿಲ್ಲ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜುಲೈ 23ರಂದು ನಡೆಯಲಿರುವ ಕರ್ನಾಟಕ ರಾಜ್ಯಪಾಲರ ಗಜೇಂದ್ರಗಡ ಪ್ರವಾಸದ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಭವನದಲ್ಲಿ ಮಂಗಳವಾರ ನಡೆದ ಪೂರ್ವಸಿದ್ಧತಾ ಹಾಗೂ ಶಿಷ್ಟಾಚಾರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ರಾಜ್ಯಪಾಲರ ಪ್ರವಾಸಕ್ಕೆ ಸಂಬಂಧಿಸಿದ ಎಲ್ಲಾ ವ್ಯವಸ್ಥೆಗಳು ಶಿಷ್ಟಾಚಾರದಂತೆ ಹಾಗೂ ಯಾವುದೇ ಲೋಪವಿಲ್ಲದಂತೆ ನಡೆಯಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ ಜಿಲ್ಲಾಧಿಕಾರಿಗಳು, ರಾಜ್ಯಪಾಲರು ಸಂಚರಿಸುವ ಮಾರ್ಗದ ರಸ್ತೆಗಳು ಸಂಪೂರ್ಣ ಸುಸ್ಥಿತಿಯಲ್ಲಿರುವಂತೆ ಸಂಬಂಧಿಸಿದ ಇಲಾಖೆಗಳು ತಕ್ಷಣ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ನಿರ್ದೇಶನ ನೀಡಿದರು.

ರಸ್ತೆ ಮಾರ್ಗದಲ್ಲಿ ಯಾವುದೇ ಅಡಚಣೆ ಅಥವಾ ಸಂಚಾರ ದಟ್ಟಣೆ ಉಂಟಾಗದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಪೊಲೀಸ್ ಇಲಾಖೆ ಹಾಗೂ ಸಂಬಂಧಿತ ಅಧಿಕಾರಿಗಳಿಗೆ ಸೂಚಿಸಿದರು.

ಗಜೇಂದ್ರಗಡ ಪಟ್ಟಣದ ಟಿಟಿಡಿ ಕಲ್ಯಾಣ ಮಂಟಪದ ಆವರಣದಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಆಗಮಿಸುವ ಸಾಧ್ಯತೆ ಇರುವುದರಿಂದ ಜನಸಂದಣಿ ನಿಯಂತ್ರಣ, ವಾಹನ ನಿಲುಗಡೆ, ಕುಡಿಯುವ ನೀರು, ಆರೋಗ್ಯ ಸೇವೆ, ಭದ್ರತೆ ಸೇರಿದಂತೆ ಅಗತ್ಯ ಮೂಲಸೌಕರ್ಯಗಳನ್ನು ಸಮರ್ಪಕವಾಗಿ ಕಲ್ಪಿಸಬೇಕು ಎಂದು ತಿಳಿಸಿದರು. ಅಗತ್ಯವಿದ್ದಲ್ಲಿ ಸಾರ್ವಜನಿಕರಿಗೆ ಪರ್ಯಾಯ ವ್ಯವಸ್ಥೆಗಳನ್ನು ಕಲ್ಪಿಸುವ ಬಗ್ಗೆಯೂ ಸಭೆಯಲ್ಲಿ ಚರ್ಚಿಸಲಾಯಿತು.

ವೇದಿಕೆ ಕಾರ್ಯಕ್ರಮದ ಸಂದರ್ಭದಲ್ಲಿ ಯಾವುದೇ ಕಾರಣಕ್ಕೂ ವಿದ್ಯುತ್ ವ್ಯತ್ಯಯ ಉಂಟಾಗದಂತೆ ಹೆಸ್ಕಾಂ ಅಧಿಕಾರಿಗಳು ನಿರಂತರ ವಿದ್ಯುತ್ ಪೂರೈಕೆ ಖಚಿತಪಡಿಸಬೇಕು. ಬ್ಯಾಕಪ್ ವ್ಯವಸ್ಥೆಯನ್ನೂ ಸಿದ್ಧವಾಗಿಟ್ಟುಕೊಳ್ಳುವಂತೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು.

ಅದೇ ರೀತಿ, ರಾಜ್ಯಪಾಲರ ಭದ್ರತೆ, ಶಿಷ್ಟಾಚಾರ, ವೈದ್ಯಕೀಯ ನೆರವು, ಸ್ವಚ್ಛತೆ, ಕುಡಿಯುವ ನೀರು, ಅಗ್ನಿಶಾಮಕ, ಸಂಚಾರ ನಿಯಂತ್ರಣ ಸೇರಿದಂತೆ ಪ್ರತಿಯೊಂದು ವಿಭಾಗವೂ ಪರಸ್ಪರ ಸಮನ್ವಯದಿಂದ ಕಾರ್ಯನಿರ್ವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ರಾಜ್ಯಪಾಲರ ಪ್ರವಾಸದ ವೇಳಾಪಟ್ಟಿಯ ವಿವರಗಳನ್ನೂ ನೀಡಲಾಯಿತು. ಜುಲೈ 23ರಂದು ಬೆಳಿಗ್ಗೆ 9.15ಕ್ಕೆ ವಿಶೇಷ ವಿಮಾನದ ಮೂಲಕ ಹುಬ್ಬಳ್ಳಿಗೆ ಆಗಮಿಸುವ ರಾಜ್ಯಪಾಲರು,

> ಶಿಷ್ಟಾಚಾರ ಪಾಲನೆಯಲ್ಲಿ ಯಾವುದೇ ರೀತಿಯ ನಿರ್ಲಕ್ಷ್ಯ ಸಹಿಸಲಾಗುವುದಿಲ್ಲ. ಅಧಿಕಾರಿಗಳು ತಮ್ಮ ಜವಾಬ್ದಾರಿಗಳನ್ನು ಅತ್ಯಂತ ಹೊಣೆಗಾರಿಕೆಯಿಂದ ನಿರ್ವಹಿಸಿ ರಾಜ್ಯಪಾಲರ ಪ್ರವಾಸವನ್ನು ಯಶಸ್ವಿಗೊಳಿಸಬೇಕು.
>
> **- ಸಿ.ಎನ್. ಶ್ರೀಧರ್**, ಜಿಲ್ಲಾಧಿಕಾರಿ, ಗದಗ

ರಸ್ತೆ ಮಾರ್ಗವಾಗಿ ಬೆಳಿಗ್ಗೆ 10.50ಕ್ಕೆ ಗಜೇಂದ್ರಗಡ ಪ್ರವಾಸಿ ಮಂದಿರಕ್ಕೆ ತಲುಪಲಿದ್ದಾರೆ. ಬಳಿಕ ಬೆಳಿಗ್ಗೆ 11.15ಕ್ಕೆ ಟಿಟಿಡಿ ಕಲ್ಯಾಣ ಮಂಟಪದ ಆವರಣದಲ್ಲಿ ನಡೆಯಲಿರುವ ಭಗವಾನ್ ಮಹಾವೀರ ಜೈನ್ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಕಾರ್ಯಕ್ರಮದ ಬಳಿಕ ಮಧ್ಯಾಹ್ನ 2 ಗಂಟೆಗೆ ರಸ್ತೆ ಮಾರ್ಗವಾಗಿ ಹುಬ್ಬಳ್ಳಿಗೆ ತೆರಳಿ, ಅಲ್ಲಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸಲಿದ್ದಾರೆ ಎಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್. ಮಾಹಿತಿ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಡಿವೈಎಸ್‌ಪಿಗಳಾದ ಮಹಾಂತೇಶ್ ಸಜ್ಜನರ ಹಾಗೂ ಮುರ್ತುಜಾ ಖಾದ್ರಿ, ಸಹಾಯಕ ಆಯುಕ್ತ ಗಂಗಪ್ಪ, ತಹಶೀಲ್ದಾರರು ಹಾಗೂ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

### 1,000 ವಿದ್ಯಾರ್ಥಿಗಳಿಗೆ ಬ್ಯಾಗ್-ಶೈಕ್ಷಣಿಕ ಸಾಮಗ್ರಿ ವಿತರಣೆ- ರಕ್ತದಾನ ಸೇರಿದಂತೆ ಸಮಾಜಮುಖಿ ಕಾರ್ಯಕ್ರಮಗಳಿಗೆ ಅಮ್ಮ ಫೌಂಡೇಶನ್ ಸಜ್ಜು

# ನಾಳೆ ಡಾ. ಬಸವರಾಜ್ ಬಳ್ಳಾರಿ ಜನ್ಮದಿನ ಆಚರಣೆ

**ವಿಜಯಸಾಕ್ಷಿ ಸುದ್ದಿ, ಗದಗ**

ಅಮ್ಮ ಫೌಂಡೇಶನ್‌ನ ಮಾರ್ಗದರ್ಶಕರೂ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಅಧ್ಯಕ್ಷರೂ ಆಗಿರುವ ಡಾ. ಬಸವರಾಜ್ ಬಳ್ಳಾರಿ ಅವರ 49ನೇ ಜನ್ಮದಿನದ ಅಂಗವಾಗಿ ಅಮ್ಮ ಫೌಂಡೇಶನ್ ವತಿಯಿಂದ ಜುಲೈ 23ರಂದು ಗದಗ ಜಿಲ್ಲೆಯಲ್ಲಿ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಲಕ್ಷ್ಮೇಶ್ವರ ಹಾಗೂ ಶಿರಹಟ್ಟಿ ತಾಲೂಕಿನ ಆಯ್ದ ಸರ್ಕಾರಿ ಶಾಲೆಗಳ ಸುಮಾರು 1,000 ಬಡ ವಿದ್ಯಾರ್ಥಿಗಳಿಗೆ ಶಾಲಾ ಬ್ಯಾಗ್, ನೋಟ್‌ಬುಕ್ ಹಾಗೂ ಪೆನ್‌ಗಳನ್ನು ವಿತರಿಸಲಾಗುತ್ತದೆ. ಅಲ್ಲದೆ ಸರ್ಕಾರಿ ಆಸ್ಪತ್ರೆಯ ರೋಗಿಗಳಿಗೆ ಹಣ್ಣುಗಳ ಕಿಟ್ ವಿತರಣೆ ಹಾಗೂ ಟಹಸಿರೇ ಉಸಿರುಟ ಧ್ಯೇಯದಡಿ 500 ಸಸಿ ನೆಡುವ ಕಾರ್ಯಕ್ರಮ ಆಯೋಜಿಸಲಾಗಿದೆ.

ಅದೇ ದಿನ ಗದಗದ ನೌಕರರ ಭವನದಲ್ಲಿ ರಕ್ತದಾನ ಶಿಬಿರ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಹಾಗೂ ವಿವಿಧ ಕ್ಷೇತ್ರಗಳ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ನಡೆಯಲಿದೆ.

ಈ ಕುರಿತು ಅಮ್ಮ ಫೌಂಡೇಶನ್ ಅಧ್ಯಕ್ಷ ಹಾಗೂ ವಕೀಲ ಮೈಲಾರಪ್ಪ ಡಿ.ಎಚ್. ಮಾತನಾಡಿ, ಅಮ್ಮ ಫೌಂಡೇಶನ್ ಸಮಾಜಮುಖಿ ಕಾರ್ಯಗಳಿಗೆ ನಿರಂತರ ಆದ್ಯತೆ ನೀಡುತ್ತಿದ್ದು, ಈ ಬಾರಿ ಸರ್ಕಾರಿ ಶಾಲೆಗಳ ಬಡ ಹಾಗೂ ಮಧ್ಯಮ ವರ್ಗದ



ವಿದ್ಯಾರ್ಥಿಗಳ ಶೈಕ್ಷಣಿಕ ನೆರವಿಗೆ ವಿಶೇಷ ಒತ್ತು ನೀಡಲಾಗಿದೆ. ವಿದ್ಯಾರ್ಥಿಗಳ ಆರ್ಥಿಕ ಹೊರೆ ಕಡಿಮೆ ಮಾಡಿ, ಶಿಕ್ಷಣಕ್ಕೆ ಪ್ರೋತ್ಸಾಹ ನೀಡುವುದು ಸಂಸ್ಥೆಯ ಪ್ರಮುಖ ಉದ್ದೇಶವಾಗಿದೆ ಎಂದು ಹೇಳಿದರು.

ಡಾ. ಬಸವರಾಜ್ ಬಳ್ಳಾರಿ ಅವರ ಜನ್ಮದಿನವನ್ನು ಸೇವಾ ಕಾರ್ಯಗಳ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಗುತ್ತಿದ್ದು, ಮುಂದೆಯೂ ಸಮಾಜಮುಖಿ ಕಾರ್ಯಕ್ರಮಗಳನ್ನು ಮತ್ತಷ್ಟು ವಿಸ್ತರಿಸಲು ಮಾರ್ಗದರ್ಶಕರ ಮಾರ್ಗದರ್ಶನ ಹಾಗೂ ಸಾರ್ವಜನಿಕರ ಸಹಕಾರ ಅಗತ್ಯವಾಗಿದೆ ಎಂದು ಅಮ್ಮ ಫೌಂಡೇಶನ್ ಪದಾಧಿಕಾರಿಗಳು ತಿಳಿಸಿದ್ದಾರೆ.

# ನಾಳೆ ರಾಜ್ಯಪಾಲರು ಗಜೇಂದ್ರಗಡಕ್ಕೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕದ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಅವರು ಜುಲೈ 23ರಂದು ಗದಗ ಜಿಲ್ಲೆಯ ಗಜೇಂದ್ರಗಡಕ್ಕೆ ಭೇಟಿ ನೀಡಲಿದ್ದಾರೆ.

ರಾಜ್ಯಪಾಲರು ಅಂದು ಬೆಳಿಗ್ಗೆ 9.15ಕ್ಕೆ ವಿಶೇಷ ವಿಮಾನದ ಮೂಲಕ ಹುಬ್ಬಳ್ಳಿಗೆ ಆಗಮಿಸಿ, ಅಲ್ಲಿಂದ ರಸ್ತೆ ಮಾರ್ಗವಾಗಿ ಪ್ರಯಾಣಿಸಿ ಬೆಳಿಗ್ಗೆ 10.50ಕ್ಕೆ ಗಜೇಂದ್ರಗಡದ ಪ್ರವಾಸಿ ಮಂದಿರಕ್ಕೆ ತಲುಪಲಿದ್ದಾರೆ.

ಬಳಿಕ ಬೆಳಿಗ್ಗೆ 11.15ಕ್ಕೆ ಗಜೇಂದ್ರಗಡದ ಟಿ.ಟಿ.ಡಿ. ಕಲ್ಯಾಣ ಮಂಟಪದ ಆವರಣದಲ್ಲಿ ನಡೆಯಲಿರುವ ಭಗವಾನ್ ಮಹಾವೀರ್ ಜೈನ್ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದ ಬಳಿಕ ಮಧ್ಯಾಹ್ನ 2 ಗಂಟೆಗೆ ರಸ್ತೆ ಮಾರ್ಗವಾಗಿ ಹುಬ್ಬಳ್ಳಿಗೆ ತೆರಳಿ, ಅಲ್ಲಿಂದ ವಿಶೇಷ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

### ಗ್ರಾಮ ಪಂಚಾಯಿತಿಗಳ ಆರ್ಥಿಕ ಸ್ವಾವಲಂಬನೆಗೆ ತೆರಿಗೆ ಸಂಗ್ರಹ ಹೆಚ್ಚಿಸಲು ಇಒ ಶ್ರೀಧರ್ ಚಿನಗುಂಡಿ ಸೂಚನೆ

# ತೆರಿಗೆ ವಸೂಲಿ ಚುರುಕು; ನಿರ್ಲಕ್ಷ್ಯಕ್ಕೆ ಕ್ರಮದ ಎಚ್ಚರಿಕೆ

**ವಿಜಯಸಾಕ್ಷಿ ಸುದ್ದಿ, ನರಗುಂದ**

ಗ್ರಾಮ ಪಂಚಾಯಿತಿಗಳ ಆರ್ಥಿಕ ಸ್ವಾವಲಂಬನೆಗೆ ತೆರಿಗೆ ವಸೂಲಾತಿ ಹೆಚ್ಚಳ ಅತ್ಯಗತ್ಯ. ಕಡಿಮೆ ತೆರಿಗೆ ಸಂಗ್ರಹಿಸುವ ಕರವಸೂಲಿಗಾರರ ನಿರ್ಲಕ್ಷ್ಯವನ್ನು ಯಾವುದೇ ಕಾರಣಕ್ಕೂ ಸಹಿಸಲಾಗುವುದಿಲ್ಲ. ವಸೂಲಾತಿಯಲ್ಲಿ ಹಿನ್ನಡೆ ಮುಂದುವರಿದರೆ ಸಂಬಂಧಿಸಿದವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು ಎಂದು ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಶ್ರೀಧರ್ ಚಿನಗುಂಡಿ ಎಚ್ಚರಿಕೆ ನೀಡಿದರು.

ತಾಲೂಕು ಪಂಚಾಯಿತಿ ಸಭಾಭವನದಲ್ಲಿ ನಡೆದ ಕರವಸೂಲಿಗಾರರು ಹಾಗೂ ವಾಟರ್‌ಮನ್‌ಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ತೆರಿಗೆ ಬಾಕಿದಾರರ




ಪಟ್ಟಿಯನ್ನು ಸಿದ್ಧಪಡಿಸಿ, ಗ್ರಾಮ ಪಂಚಾಯಿತಿ ಸಿಬ್ಬಂದಿ ಮೂಲಕ ಮುಂಚಿತವಾಗಿ ಮಾಹಿತಿ ನೀಡಿ ವಸೂಲಾತಿ ಕಾರ್ಯ ಚುರುಕುಗೊಳಿಸಬೇಕು. ಸಾರ್ವಜನಿಕರು ತಮ್ಮ ದೈನಂದಿನ ಕೆಲಸಗಳಿಗೆ ತೆರಳುವ ಮುನ್ನವೇ ಮನೆಗಳಿಗೆ ಭೇಟಿ ನೀಡಿ ತೆರಿಗೆ ವಸೂಲಿ ಮಾಡುವಂತೆ ಸೂಚಿಸಿದರು. ವಸೂಲಾದ ತೆರಿಗೆ ಮೊತ್ತವನ್ನು ನೇರವಾಗಿ ಬ್ಯಾಂಕ್ ಖಾತೆಗೆ ಜಮೆ ಮಾಡಬೇಕು.

ಗ್ರಾಮ ಪಂಚಾಯಿತಿಗಳು ಉತ್ತಮ ಮೂಲಸೌಕರ್ಯ ಹಾಗೂ ಸೇವೆಗಳನ್ನು ಒದಗಿಸಿದಾಗ ಜನರು ಸ್ವಯಂಪ್ರೇರಿತವಾಗಿ ತೆರಿಗೆ ಪಾವತಿಸುತ್ತಾರೆ. ಆದರೆ ಕಡಿಮೆ ತೆರಿಗೆ ವಸೂಲಾತಿಗೆ ಕರವಸೂಲಿಗಾರರನ್ನೇ ಹೊಣೆ ಮಾಡಲಾಗುವುದು ಎಂದು ಸ್ಪಷ್ಟಪಡಿಸಿದರು.

ಕಡಿಮೆ ತೆರಿಗೆ ವಸೂಲಾತಿ ಮಾಡಿರುವ ಗ್ರಾಮ ಪಂಚಾಯಿತಿಗಳ ಕರವಸೂಲಿಗಾರರನ್ನು ಪ್ರಶ್ನಿಸಿದ ಅವರು, ವಸೂಲಾತಿ ಕುಂಠಿತವಾಗಲು ಕಾರಣವೇನು, ಈ ಕುರಿತು ಪಿಡಿಒಗಳ ಗಮನಕ್ಕೆ ತಂದಿದ್ದೀರಾ ಎಂದು ವಿಚಾರಿಸಿದರು. ಮುಂದೆಯೂ ಇದೇ ಪರಿಸ್ಥಿತಿ ಮುಂದುವರಿದರೆ ಶಿಸ್ತುಕ್ರಮ ಅನಿವಾರ್ಯ ಎಂದು ಎಚ್ಚರಿಸಿದರು.

ವಾಟರ್‌ಮನ್‌ಗಳನ್ನು ಉದ್ದೇಶಿಸಿ ಮಾತನಾಡಿದ ಅವರು, ಮಳೆ ಕೊರತೆಯಿರುವ ಹಿನ್ನೆಲೆಯಲ್ಲಿ ಗ್ರಾಮಗಳಲ್ಲಿ ಕುಡಿಯುವ ನೀರಿನ ಪೂರೈಕೆಗೆ ಯಾವುದೇ ತೊಂದರೆಯಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು. ನೀರಿನ ಮೂಲಗಳ ಸಂರಕ್ಷಣೆ ಹಾಗೂ ನೀರಿನ ಮಿತ ಬಳಕೆಯ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದರು.

ಕುಡಿಯುವ ನೀರಿನ ಸಮಸ್ಯೆ ಕಂಡುಬಂದ ಕೂಡಲೇ ಸಂಬಂಧಿತ ಪಿಡಿಒ ಹಾಗೂ ತಾಲೂಕು ಪಂಚಾಯಿತಿ ಕಚೇರಿಯ ಗಮನಕ್ಕೆ ತಂದು ತ್ವರಿತವಾಗಿ ಪರಿಹಾರ ಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಮುಂದಿನ ತಿಂಗಳುಗಳಲ್ಲಿಯೂ ಉತ್ತಮ ತೆರಿಗೆ ವಸೂಲಾತಿ ಸಾಧಿಸುವ ಕರವಸೂಲಿಗಾರರನ್ನು ಇದೇ ರೀತಿಯಲ್ಲಿ ಗೌರವಿಸಿ ಪ್ರೋತ್ಸಾಹಿಸಲಾಗುವುದು ಎಂದು ತಿಳಿಸಲಾಯಿತು.

ಸಭೆಯಲ್ಲಿ ತಾಲೂಕು ಪಂಚಾಯಿತಿ ಯೋಜನಾಧಿಕಾರಿ ಮಹಾಂತೇಶ್ ನಿಟ್ಟಾಲಿ, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕಿ ಕೃಷ್ಣಮ್ಮ ಹಾದಿಮನಿ ಹಾಗೂ ತಾಲೂಕಿನ ಎಲ್ಲ ಗ್ರಾಮ ಪಂಚಾಯಿತಿಗಳ ಕರವಸೂಲಿಗಾರರು ಮತ್ತು ವಾಟರ್‌ಮನ್‌ಗಳು ಉಪಸ್ಥಿತರಿದ್ದರು.

## ಉತ್ತಮ ಸಾಧಕರಿಗೆ ಗೌರವ

**ಸಭೆಯಲ್ಲಿ ಜೂನ್ ತಿಂಗಳಲ್ಲಿ ಅತಿ ಹೆಚ್ಚು ತೆರಿಗೆ ವಸೂಲಾತಿ ಮಾಡಿದ ಕೊಣ್ಣೂರು, ಹುಣಶಿಕಟ್ಟಿ, ಶಿರೋಳ ಹಾಗೂ ವಾಸನ ಗ್ರಾಮ ಪಂಚಾಯಿತಿಗಳ ಕರವಸೂಲಿಗಾರರನ್ನು ತಾಲೂಕು ಪಂಚಾಯಿತಿ ವತಿಯಿಂದ ಟಜನಾಭಿಪ್ರಾಯ ಚಪ್ಪಾಳೆಟ ಕಾರ್ಯಕ್ರಮದಡಿ ಶಾಲು ಹೊದಿಸಿ, ಮಾಲೆ ಹಾಕಿ ಸಭೆಯಲ್ಲಿ ಉಪಸ್ಥಿತರಿದ್ದವರಿಂದ ಚಪ್ಪಾಳೆ ತಟ್ಟಿಸುವ ಮೂಲಕ ಸನ್ಮಾನಿಸಲಾಯಿತು.**

> ಗ್ರಾಮ ಪಂಚಾಯಿತಿಗಳ ಆರ್ಥಿಕ ಸ್ವಾವಲಂಬನೆಗೆ ತೆರಿಗೆ ವಸೂಲಾತಿ ಹೆಚ್ಚಳ ಅತ್ಯಗತ್ಯ. ಕಡಿಮೆ ತೆರಿಗೆ ಸಂಗ್ರಹಿಸುವ ಕರವಸೂಲಿಗಾರರ ನಿರ್ಲಕ್ಷ್ಯವನ್ನು ಯಾವುದೇ ಕಾರಣಕ್ಕೂ ಸಹಿಸಲಾಗುವುದಿಲ್ಲ. ವಸೂಲಾತಿಯಲ್ಲಿ ಹಿನ್ನಡೆ ಮುಂದುವರಿದರೆ ಕ್ರಮ ಕೈಗೊಳ್ಳುವುದು ಅನಿವಾರ್ಯ.
>
> **- ಶ್ರೀಧರ್ ಚಿನಗುಂಡಿ, ಕಾರ್ಯನಿರ್ವಾಹಕ ಅಧಿಕಾರಿ, ತಾಲೂಕು ಪಂಚಾಯಿತಿ, ನರಗುಂದ**

## ಸಂಕ್ಷಿಪ್ತ ಸುದ್ದಿಗಳು

### ಮಹಿಳೆಯರಿಗೆ ಆರೋಗ್ಯ ಜಾಗೃತಿ ಕಾರ್ಯಕ್ರಮದಲ್ಲಿ ವೈದ್ಯೆ ಡಾ. ಪ್ರಭಾ ದೇಸಾಯಿ ಕಿವಿಮಾತು

# ಋತುಬಂಧದ ನಂತರ ನಿರ್ಲಕ್ಷ್ಯ ಬೇಡ



**ವಿಜಯಸಾಕ್ಷಿ ಸುದ್ದಿ, ಗದಗ**

ಋತುಬಂಧ (ಮೆನೋಪಾಸ್) ನಂತರ ಮಹಿಳೆಯರು ತಮ್ಮ ದೈಹಿಕ ಹಾಗೂ ಮಾನಸಿಕ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸುವುದು ಅಗತ್ಯ ಎಂದು ವೈದ್ಯೆ ಡಾ. ಪ್ರಭಾ ದೇಸಾಯಿ ಸಲಹೆ ನೀಡಿದರು.

ನಗರದ ಶ್ರೀ ಅಕ್ಕಮಹಾದೇವಿ ಯೋಗ ವಿಜ್ಞಾನ ಕೇಂದ್ರ ವತಿಯಿಂದ ಆಯೋಜಿಸಿದ್ದ ಮಹಿಳೆಯರ ಆರೋಗ್ಯ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. 45ರಿಂದ 50 ವರ್ಷದ ನಂತರ ಮಹಿಳೆಯರಲ್ಲಿ ಹಾರ್ಮೋನ್ ಬದಲಾವಣೆಗಳು ಸಂಭವಿಸುತ್ತವೆ. ಈಸ್ಟ್ರೋಜನ್ ಪ್ರಮಾಣ ಕಡಿಮೆಯಾಗುವುದರಿಂದ ದೇಹದಲ್ಲಿ ಉತ್ಸಾಹ ಕುಂಠಿತವಾಗುವುದು, ಮರೆವು ಹೆಚ್ಚಾಗುವುದು ಸೇರಿದಂತೆ ಹಲವು ಆರೋಗ್ಯ ಸಮಸ್ಯೆಗಳು ಕಾಣಿಸಿಕೊಳ್ಳಬಹುದು ಎಂದು ವಿವರಿಸಿದರು. ಇಂತಹ ಸಂದರ್ಭದಲ್ಲಿ ಮಾನಸಿಕ, ಸಾಮಾಜಿಕ ಹಾಗೂ ಆಧ್ಯಾತ್ಮಿಕವಾಗಿ ಆರೋಗ್ಯಕರ ಜೀವನಶೈಲಿಯನ್ನು ಅಳವಡಿಸಿಕೊಳ್ಳಬೇಕು. ಯೋಗ ಮತ್ತು ನಿಯಮಿತ ವ್ಯಾಯಾಮವನ್ನು ರೂಢಿಸಿಕೊಳ್ಳುವುದರಿಂದ ಮನಸ್ಸು ಶಾಂತವಾಗುತ್ತದೆ. ಆಹಾರದಲ್ಲಿ ಸಕ್ಕರೆಯ ಪ್ರಮಾಣವನ್ನು ಕಡಿಮೆ ಮಾಡಿ, ಪ್ರೋಟೀನ್‌ಯುಕ್ತ ಆಹಾರ ಹಾಗೂ ಅಗಸೆ ಬೀಜಗಳಂತಹ ಪೌಷ್ಟಿಕ ಆಹಾರ ಸೇವಿಸಬೇಕು. ವಿವಿಧ ಕಾಯಿಲೆಗಳಿಂದ ದೂರವಿರಲು ಮುನ್ನೆಚ್ಚರಿಕೆ ಕ್ರಮಗಳನ್ನು ಅನುಸರಿಸುವುದು ಅಗತ್ಯ ಎಂದು ಮಹಿಳೆಯರಿಗೆ ಸಲಹೆ ನೀಡಿದರು.

> **ಋತುಬಂಧದ ನಂತರ ಮಹಿಳೆಯರು ಯೋಗ, ನಿಯಮಿತ ವ್ಯಾಯಾಮ ಹಾಗೂ ಸಮತೋಲಿತ ಆಹಾರ ಪದ್ಧತಿ ರೂಢಿಸಿಕೊಂಡರೆ ಅನೇಕ ಆರೋಗ್ಯ ಸಮಸ್ಯೆಗಳನ್ನು ನಿಯಂತ್ರಿಸಬಹುದು.**
>
> **- ಡಾ. ಪ್ರಭಾ ದೇಸಾಯಿ**

ಕಾರ್ಯಕ್ರಮದಲ್ಲಿ ಶ್ರೀದೇವಿ ಶೆಟ್ಟರ, ಅಕ್ಕಮಹಾದೇವಿ ಚೆಟ್ಟಿ, ಸುಗಲಾ ಯಳಮಲಿ, ಜಯಶ್ರೀ ಹುಬ್ಬಳ್ಳಿ, ಪುಷ್ಪಾ ಭಂಡಾರಿ, ಮಾಧುರಿ ಮಾಳೆಕೊಪ್ಪ, ಶಶಿಕಲಾ ಮಾಲಿಪಾಟೀಲ, ಸುಶೀಲಾ ಕೋಟಿ, ಸಂಧ್ಯಾ ಕೋಟಿ, ಆಶಾ ಪಟ್ಟಣಶೆಟ್ಟಿ, ಶಶಿಕಲಾ ಹಿರೇಮಠ, ಸುವರ್ಣಾ ಹೊಸಂಗಡಿ, ಅರುಣಾ ಹಳಕಟ್ಟಿ, ಉಮಾ ಕವಳಿಕಾಯಿ, ರೇಖಾ ರೊಟ್ಟಿ, ಶೀಲಾ ಗೋಟಡಕಿ, ನಿರ್ಮಲಾ ಪಾಟೀಲ, ರತ್ನಾ ದಾಸರ ಸೇರಿದಂತೆ ಅನೇಕ ಸದಸ್ಯೆಯರು ಉಪಸ್ಥಿತರಿದ್ದರು.

ಕಾರ್ಯಕ್ರಮದ ಆರಂಭದಲ್ಲಿ ಜಯಶ್ರೀ ಹಳ್ಳಿಕೇರಿ ಪ್ರಾರ್ಥಿಸಿದರು. ಕೇಂದ್ರದ ಅಧ್ಯಕ್ಷೆ ಜಯಶ್ರೀ ಉಗಲಾಟ ಸ್ವಾಗತಿಸಿದರು. ಶಾರದಾ ಎಸ್. ಬೊಮ್ಮಸಾಗರ ಕಾರ್ಯಕ್ರಮ ನಿರೂಪಿಸಿದರೆ, ಜ್ಯೋತಿ ದಾನಪ್ಪಗೌಡರ ವಂದಿಸಿದರು.

### ಘನ ತ್ಯಾಜ್ಯ ನಿರ್ವಹಣೆ ಕುರಿತು ಮನೆ-ಮನೆಗೆ ಅರಿವು; ಕಡಲೆಬಾಳುವಿನಲ್ಲಿ ಅಂತಿಮ ಹಂತದ ಕಾರ್ಯಕ್ರಮ ಸಂಪನ್ನ

# ಸ್ವಚ್ಛತಾ ಜಾಗೃತಿ ಅಭಿಯಾನ ಯಶಸ್ವಿ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಸ್ವಚ್ಛ ಭಾರತ ಮಿಷನ್ (ಗ್ರಾಮೀಣ) ಯೋಜನೆಯಡಿ ತಾಲೂಕು ಪಂಚಾಯಿತಿ ವತಿಯಿಂದ ತಾಲೂಕಿನ ಎಲ್ಲಾ 21 ಗ್ರಾಮ ಪಂಚಾಯಿತಿಗಳಲ್ಲಿ ಘನ ತ್ಯಾಜ್ಯ ನಿರ್ವಹಣಾ ನಿಯಮಗಳು2026 ಕುರಿತು ಹಮ್ಮಿಕೊಂಡಿದ್ದ ಮಾಹಿತಿ, ಶಿಕ್ಷಣ ಮತ್ತು ಸಂವಹನ (ಐಇಸಿ) ಜಾಗೃತಿ ಅಭಿಯಾನ ಯಶಸ್ವಿಯಾಗಿ ಪೂರ್ಣಗೊಂಡಿದೆ.ಅಭಿಯಾನದ 21ನೇ ಹಾಗೂ ಅಂತಿಮ ಹಂತದ ಕಾರ್ಯಕ್ರಮ ಕಡಲೆಬಾಳು ಗ್ರಾಮ ಪಂಚಾಯಿತಿಯಲ್ಲಿ ನಡೆಯಿತು. ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ ರಮೇಶ್ ಮಾಲಿಂಗಪುರ ಅಧ್ಯಕ್ಷತೆ ವಹಿಸಿದ್ದರು.ರಾಜೀವ್ ಗಾಂಧಿ ಪಂಚಾಯತ್ ರಾಜ್ ಫೆಲೋ ಡಾ. ಅಂಜಿನಪ್ಪ ಡಿ. ಮಾತನಾಡಿ, ಘನ ತ್ಯಾಜ್ಯವನ್ನು ಮೂಲದಲ್ಲಿಯೇ ಒದ್ದೆ, ಒಣ ಹಾಗೂ ಅಪಾಯಕಾರಿ ತ್ಯಾಜ್ಯವೆಂದು ವಿಂಗಡಿಸಿ ವೈಜ್ಞಾನಿಕವಾಗಿ ನಿರ್ವಹಿಸುವುದು ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿಯಾಗಿದೆ ಎಂದು ಹೇಳಿದರು. ಗ್ರಾಮ ಪಂಚಾಯಿತಿ, ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರ ಸಹಭಾಗಿತ್ವದಿಂದ ಮಾತ್ರ ಸ್ವಚ್ಛ ಗ್ರಾಮಆರೋಗ್ಯ ಗ್ರಾಮ ಪರಿಕಲ್ಪನೆ ಸಾಕಾರಗೊಳ್ಳಲಿದೆ ಎಂದರು. ಜಿಲ್ಲಾ ಪಂಚಾಯಿತಿ ಮಾನವ ಸಂಪನ್ಮೂಲ ಅಭಿವೃದ್ಧಿ (ಎಚ್‌ಆರ್‌ಡಿ) ಸಂಯೋಜಕಿ ರೇಣುಕಾ ಮಾತನಾಡಿ, ಕಸದ ವೈಜ್ಞಾನಿಕ ನಿರ್ವಹಣೆ, ಮಹಿಳೆಯರ ಪಾತ್ರ ಹಾಗೂ ಪರಿಸರ ಸಂರಕ್ಷಣೆಯ ಮಹತ್ವವನ್ನು ವಿವರಿಸಿದರು. ವ್ಯಾಪಾರಿಗಳು ತಮ್ಮ ಅಂಗಡಿಗಳಲ್ಲಿ ಉತ್ಪತ್ತಿಯಾಗುವ ಒಣ ತ್ಯಾಜ್ಯವನ್ನು ಮೂಲದಲ್ಲಿಯೇ ವಿಂಗಡಿಸಿ ಗ್ರಾಮ ಪಂಚಾಯಿತಿಗೆ ಹಸ್ತಾಂತರಿಸುವಂತೆ ಮನವಿ ಮಾಡಿದರು.ತಾಲೂಕು ಪಂಚಾಯಿತಿ ಸಹಾಯಕ ನಿರ್ದೇಶಕ ರಮೇಶ್ ಮಾಲಿಂಗಪುರ ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿಯೂ ಪ್ಲಾಸ್ಟಿಕ್ ಸೇರಿದಂತೆ ವಿವಿಧ ತ್ಯಾಜ್ಯಗಳ ಪ್ರಮಾಣ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಘನ ತ್ಯಾಜ್ಯ ನಿರ್ವಹಣಾ ಘಟಕಗಳ ಸ್ಥಾಪನೆಗೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಕೆಲವು ಸ್ಥಳೀಯ ಸಮಸ್ಯೆಗಳಿಂದ ಕೆಲವು ಘಟಕಗಳ ಕಾರ್ಯಾರಂಭ ವಿಳಂಬವಾಗಿದ್ದು, ಎಲ್ಲ ಘಟಕಗಳು ಸಮರ್ಪಕವಾಗಿ ಕಾರ್ಯನಿರ್ವಹಿಸಿದರೆ ಸ್ವಚ್ಛ ವಾಹಿನಿ ವ್ಯವಸ್ಥೆ ಮತ್ತಷ್ಟು ಬಲಗೊಂಡು ಸ್ವಚ್ಛ ಭಾರತ ಮಿಷನ್ ಯಶಸ್ವಿಯಾಗಲಿದೆ ಎಂದು ಹೇಳಿದರು. ಅಭಿಯಾನದ ಅಂಗವಾಗಿ ಜಾಗೃತಿ ಸಭೆ, ಮನೆ-ಮನೆ ಭೇಟಿ, ಅಂಗಡಿ ಮಾಲೀಕರೊಂದಿಗೆ ಸಂವಾದ, ಸ್ವಚ್ಛತಾ ಪ್ರತಿಜ್ಞೆ ಹಾಗೂ ಸಾರ್ವಜನಿಕರಿಗೆ ಘನ ತ್ಯಾಜ್ಯ ನಿರ್ವಹಣಾ ನಿಯಮಗಳ ಕುರಿತು ಅರಿವು ಮೂಡಿಸುವ ಕಾರ್ಯಕ್ರಮಗಳು ನಡೆದವು. ಸಾರ್ವಜನಿಕರು ಕಸವನ್ನು ಮೂಲದಲ್ಲಿಯೇ ವಿಂಗಡಿಸಿ ಗ್ರಾಮವನ್ನು ಸ್ವಚ್ಛವಾಗಿಡುವುದಾಗಿ ಭರವಸೆ ನೀಡಿದರು. ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಸಿಬ್ಬಂದಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು, ಸಂಜೀವಿನಿ ಒಕ್ಕೂಟದ ಸದಸ್ಯರು, ಜನಪ್ರತಿನಿಧಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಗ್ರಾಮಸ್ಥರು ಪಾಲ್ಗೊಂಡಿದ್ದರು.

> **ಗ್ರಾಮೀಣ ಪ್ರದೇಶಗಳಲ್ಲಿಯೂ ವೈಜ್ಞಾನಿಕ ಘನ ತ್ಯಾಜ್ಯ ನಿರ್ವಹಣೆ ಅತ್ಯಗತ್ಯ. ಸಾರ್ವಜನಿಕರ ಸಹಕಾರದಿಂದಲೇ ಸ್ವಚ್ಛ ಗ್ರಾಮ ನಿರ್ಮಾಣ ಸಾಧ್ಯ.**
>
> **- ರಮೇಶ್ ಮಾಲಿಂಗಪುರ,** ಸಹಾಯಕ ನಿರ್ದೇಶಕರು, ತಾಲೂಕು ಪಂಚಾಯಿತಿ, ಹಗರಿಬೊಮ್ಮನಹಳ್ಳಿ

### ಪಾಲಕರ ದಿನಾಚರಣೆಯಲ್ಲಿ ತಾಯಂದಿರ ಪಾದಪೂಜೆ; ಭಾವುಕರಾದ ಪಾಲಕರು, ಸಾಧಕ ವಿದ್ಯಾರ್ಥಿನಿಯರಿಗೆ ಸನ್ಮಾನ

# ತಾಯಿಯ ಪಾದದಲ್ಲಿ ದೇವರನ್ನು ಕಂಡ ವಿದ್ಯಾರ್ಥಿಗಳು

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಕ್ಕಳ ಜೀವನದ ಮೊದಲ ಗುರು ತಾಯಿ ಎಂಬ ಸಂದೇಶವನ್ನು ಸಾರುವ ಅಪರೂಪದ ಹಾಗೂ ಭಾವನಾತ್ಮಕ ಕ್ಷಣಗಳಿಗೆ ಸಮೀಪದ ಜಕ್ಕಲಿ ಗ್ರಾಮದ ಶ್ರೀ ಅಂದಾನಪ್ಪ ಜ್ಞಾನಪ್ಪ ದೊಡ್ಡಮೇಟಿ ಸರ್ಕಾರಿ ಪ್ರೌಢಶಾಲೆ ಸೋಮವಾರ ಸಾಕ್ಷಿಯಾಯಿತು.

ಪಾಲಕರ ದಿನಾಚರಣೆಯ ಅಂಗವಾಗಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ತಮ್ಮ ತಾಯಂದಿರ ಪಾದಪೂಜೆ ನೆರವೇರಿಸಿ ಆಶೀರ್ವಾದ ಪಡೆದರು. ತಾಯಂದಿರ ಪಾದ ತೊಳೆದು, ಕುಂಕುಮ ಅರ್ಪಿಸಿ, ನಮಸ್ಕರಿಸಿದ ವಿದ್ಯಾರ್ಥಿಗಳ ಈ ಗೌರವವನ್ನು ಕಂಡ ಅನೇಕ ತಾಯಂದಿರು ಭಾವುಕರಾಗಿ ಕಣ್ಣೀರಿಟ್ಟರು. ಕೆಲವರು ಮಕ್ಕಳನ್ನು ಅಪ್ಪಿಕೊಂಡು ಆಶೀರ್ವದಿಸಿದರೆ, ಮತ್ತೂ ಕೆಲವರು ಸಂತಸದ ಕಣ್ಣೀರಿನಲ್ಲೇ ತಮ್ಮ ಭಾವನೆಗಳನ್ನು ಹಂಚಿಕೊಂಡರು. ಶಾಲಾ ಆವರಣ ಕೆಲಕಾಲ ಭಾವನೆಗಳ ಸಂಗಮವಾಗಿ ಮಾರ್ಪಟ್ಟಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮುಖ್ಯ ಶಿಕ್ಷಕಿ ಎಂ. ಶಾರದಾ ಮಾತನಾಡಿ, ಮಕ್ಕಳ ಯಶಸ್ಸಿನ ಹಿಂದೆ ಪಾಲಕರ ತ್ಯಾಗ ಮತ್ತು ಶಿಕ್ಷಕರ ಮಾರ್ಗದರ್ಶನ ಇರುತ್ತದೆ.

ತಾಯಿ-ತಂದೆಯರ ಗೌರವವನ್ನು ಅರಿತ ವಿದ್ಯಾರ್ಥಿಗಳು ಉತ್ತಮ ನಾಗರಿಕರಾಗಿ ಬೆಳೆಯುತ್ತಾರೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮದ ಹೆಮ್ಮೆಯ ಸಾಧಕ ವಿದ್ಯಾರ್ಥಿನಿಯರಾದ ಸೃಷ್ಟಿ ಮೇಟಿ ಹಾಗೂ ಪ್ರೀತಿ ಬುಳ್ಳಾ ಅವರನ್ನು ಸನ್ಮಾನಿಸಲಾಯಿತು. ಅವರ ಸಾಧನೆ ಇತರ ವಿದ್ಯಾರ್ಥಿಗಳಿಗೆ ಪ್ರೇರಣೆಯಾಗಲಿ ಎಂದು ಆಶಿಸಲಾಯಿತು.

ಶಿಕ್ಷಕ ವಿ.ವಿ. ಅಣ್ಣಿಗೇರಿ ಮಾತನಾಡಿ, ಪುಸ್ತಕದ ಶಿಕ್ಷಣದ ಜೊತೆಗೆ ಸಂಸ್ಕಾರ ಶಿಕ್ಷಣವೂ ಅತ್ಯಗತ್ಯ. ತಾಯಿ-ತಂದೆಯರ ಬಗ್ಗೆ ಗೌರವ, ಕೃತಜ್ಞತೆ ಹಾಗೂ ಮಾನವೀಯ ಮೌಲ್ಯಗಳನ್ನು ಮಕ್ಕಳಲ್ಲಿ ಬೆಳೆಸುವ ಉದ್ದೇಶದಿಂದ ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಸನ್ಮಾನ ಸ್ವೀಕರಿಸಿದ ಸೃಷ್ಟಿ ಮೇಟಿ ಹಾಗೂ ಪ್ರೀತಿ ಬುಳ್ಳಾ, ತಮ್ಮ ಸಾಧನೆಯ ಹಿಂದೆ ಪಾಲಕರ ಆಶೀರ್ವಾದ ಹಾಗೂ ಶಿಕ್ಷಕರ ಮಾರ್ಗದರ್ಶನವೇ ಪ್ರಮುಖ ಕಾರಣ ಎಂದು



> **ಪುಸ್ತಕದ ಶಿಕ್ಷಣದ ಜೊತೆಗೆ ಸಂಸ್ಕಾರ ಶಿಕ್ಷಣವೂ ಅಗತ್ಯ. ತಾಯಿ-ತಂದೆಯರ ಬಗ್ಗೆ ಗೌರವ ಮತ್ತು ಕೃತಜ್ಞತೆಯ ಭಾವನೆ ಬೆಳೆಸುವುದೇ ಈ ಕಾರ್ಯಕ್ರಮದ ಉದ್ದೇಶ.**
>
> **- ವಿ.ವಿ. ಅಣ್ಣಿಗೇರಿ, ಶಿಕ್ಷಕರು**

ತಿಳಿಸಿ, ವಿದ್ಯಾರ್ಥಿಗಳು ದೊಡ್ಡ ಕನಸುಗಳನ್ನು ಕಾಣಬೇಕು ಮತ್ತು ಅವುಗಳನ್ನು ನನಸಾಗಿಸಲು ನಿರಂತರ ಪರಿಶ್ರಮ ಪಡಬೇಕು ಎಂದು ಕರೆ ನೀಡಿದರು.

ಶಿಕ್ಷಕ ವಿ.ವಿ. ಅಣ್ಣಿಗೇರಿ ಕಾರ್ಯಕ್ರಮವನ್ನು ಆಯೋಜಿಸಿ ನಿರೂಪಿಸಿದರು. ಶಾಲೆಯ ಶಿಕ್ಷಕರು, ಸಿಬ್ಬಂದಿ, ಪಾಲಕರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಬಣಜಿಗ ಕ್ಷೇಮಾಭಿವೃದ್ಧಿ ಸಂಘದ 13ನೇ ವಾರ್ಷಿಕೋತ್ಸವ ಸಮಾರಂಭದಲ್ಲಿ ಅಂದಪ್ಪ ಜವಳಿ ಅಭಿಮತ

# ಸಂಘಟಿತ ಸಮಾಜವೇ ಅಭಿವೃದ್ಧಿಯ ಶಕ್ತಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮಾಜದ ಅಭಿವೃದ್ಧಿಗೆ ಸಂಘಟಿತ ಶಕ್ತಿ ಅತ್ಯಗತ್ಯವಾಗಿದ್ದು, ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ನರೇಗಲ್ಲಕೋಡಿಕೊಪ್ಪ ಘಟಕ ಕಳೆದ 13 ವರ್ಷಗಳಿಂದ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸುವ ಮೂಲಕ ಮಾದರಿ ಸಂಘಟನೆಯಾಗಿ ಹೊರಹೊಮ್ಮಿದೆ ಎಂದು ಕರ್ನಾಟಕ ರಾಜ್ಯ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ ಉಪಾಧ್ಯಕ್ಷ ಅಂದಪ್ಪ ಜವಳಿ ಹೇಳಿದರು.

ಪಟ್ಟಣದ ಶ್ರೀ ಬಸವೇಶ್ವರ ಇಂಜಿನಿಯರಿಂಗ್ ವರ್ಕ್‌ಶಾಪ್‌ನಲ್ಲಿ ಭಾನುವಾರ ನಡೆದ ಬಣಜಿಗ ಕ್ಷೇಮಾಭಿವೃದ್ಧಿ ಸಂಘದ 13ನೇ ವರ್ಷದ ವಾರ್ಷಿಕೋತ್ಸವ, ಪ್ರತಿಭಾ ಪುರಸ್ಕಾರ ಹಾಗೂ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನರೇಗಲ್ಲಕೋಡಿಕೊಪ್ಪ ಘಟಕವು ವರ್ಷಪೂರ್ತಿ ಸಮಾಜಮುಖಿ ಹಾಗೂ ಜನೋಪಯೋಗಿ ಕಾರ್ಯಕ್ರಮಗಳನ್ನು ನಡೆಸುತ್ತಿದ್ದು, ಇತರ ಸಂಘಟನೆಗಳಿಗೆ ಮಾದರಿಯಾಗಿದೆ. ಸಂಘವು ಸಮಾಜದ ವಿಶ್ವಾಸ ಗಳಿಸಿದ್ದು, ಸ್ವಂತ ನಿವೇಶನವನ್ನೂ ಹೊಂದಿದೆ. ಆ ಜಾಗೆಯಲ್ಲಿ ಸುಸಜ್ಜಿತ ಸಮಾಜ ಭವನ ನಿರ್ಮಿಸುವ ಕನಸಿದ್ದು, ಸಮಾಜದ ಎಲ್ಲರ ಸಹಕಾರದಿಂದ ಅದು ಶೀಘ್ರದಲ್ಲೇ ನನಸಾಗುವ ವಿಶ್ವಾಸವಿದೆ ಎಂದು ಹೇಳಿದರು.

ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎ. ಬಳಗೇರ ಮಾತನಾಡಿ, ಸಮಾಜದ ಅಭಿವೃದ್ಧಿಗೆ ಶಿಕ್ಷಣ, ಸಂಸ್ಕಾರ, ಒಗ್ಗಟ್ಟು ಹಾಗೂ ಸೇವಾ ಮನೋಭಾವ ಅತ್ಯಗತ್ಯವಾಗಿದೆ ಎಂದರು. ಮಕ್ಕಳನ್ನು ಕೇವಲ

> **ಸಂಘಟಿತ ಸಮಾಜವೇ ಅಭಿವೃದ್ಧಿಯ ನಿಜವಾದ ಶಕ್ತಿ. ಸಮಾಜದ ಎಲ್ಲರ ಸಹಕಾರದಿಂದ ಬಲಿಷ್ಠ ಸಂಘಟನೆ ಕಟ್ಟಿದಾಗ ಮಾತ್ರ ಸಮುದಾಯದ ಸರ್ವಾಂಗೀಣ ಅಭಿವೃದ್ಧಿ ಸಾಧ್ಯ.**
>
> **- ಅಂದಪ್ಪ ಜವಳಿ,** ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಬಣಜಿಗ ಕ್ಷೇಮಾಭಿವೃದ್ಧಿ ಸಂಘ

ಹಣ ಸಂಪಾದಿಸುವ ಯಂತ್ರಗಳನ್ನಾಗಿ ಅಲ್ಲ, ಸಮಾಜಕ್ಕೆ ಕೊಡುಗೆ ನೀಡುವ ಸತ್ಪ್ರಜೆಗಳನ್ನಾಗಿ ರೂಪಿಸಬೇಕು ಎಂದು ಸಲಹೆ ನೀಡಿದರು.

ಸರಿಯಾದ ಶಿಕ್ಷಣ, ಸೂಕ್ತ ಮಾರ್ಗದರ್ಶನ ದೊರೆತರೆ ರೈತನ ಮಗುವೂ ಉನ್ನತ ಸಾಧನೆ ಮಾಡಬಲ್ಲದು. ಪ್ರತಿಭಾವಂತರನ್ನು ಗೌರವಿಸುವುದು ಸಮಾಜದ ಭವಿಷ್ಯಕ್ಕೆ ಬುನಾದಿ ಹಾಕಿದಂತಾಗುತ್ತದೆ ಎಂದು ಹೇಳಿದರು. ಬಸವ ತತ್ವಗಳಾದ ಕಾಯಕ, ದಾಸೋಹ ಮತ್ತು ಪ್ರಸಾದಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ವ್ಯಕ್ತಿ ಹಾಗೂ ಸಮಾಜ ಬಲಿಷ್ಠವಾಗುತ್ತದೆ ಎಂದರು.

ಮುಖ್ಯ ಅತಿಥಿಯಾಗಿ ಮಾತನಾಡಿದ ಗದಗ ಜಿಲ್ಲಾ ಬಿಜೆಪಿ ಅಧ್ಯಕ್ಷ ರಾಜು ಕುರುಡಗಿ, ಬಣಜಿಗ ಸಮಾಜವು ಸದಾ ಸರ್ವ ಸಮಾಜದ ಒಳಿತಿಗಾಗಿ ದುಡಿದ ಸಮುದಾಯವಾಗಿದೆ. ಸಮಾಜದ ಹಕ್ಕುಗಳಿಗಾಗಿ ಬಲಿಷ್ಠ ಸಂಘಟನೆ ಹಾಗೂ ಸಮರ್ಥ ನಾಯಕತ್ವ ಅಗತ್ಯವಾಗಿದೆ ಎಂದು ಹೇಳಿದರು.

ಶೆಟ್ಟರು ಎಂಬ ಗುರುತು ಸಮಾಜದ ಹೆಮ್ಮೆಯಾಗಿದ್ದು, ಯುವಕರು ಉದ್ಯೋಗದ ಜೊತೆಗೆ ವ್ಯಾಪಾರ ಮತ್ತು ಉದ್ಯಮ ಕ್ಷೇತ್ರದಲ್ಲೂ ಮುಂದುವರಿದು ಸಮಾಜದ ಆರ್ಥಿಕ ಶಕ್ತಿಯನ್ನು ಹೆಚ್ಚಿಸಬೇಕು ಎಂದು ಕರೆ ನೀಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಸಂಘದ ಅಧ್ಯಕ್ಷ ಶಿವಯೋಗಿ ಜಕ್ಕಲಿ, ವೃತ್ತಿ ಅಥವಾ ವ್ಯಾಪಾರ ಯಾವುದೇ ಆಗಿರಲಿ ಕುಟುಂಬ ಹಾಗೂ ಸಾಮಾಜಿಕ ಸಂಬಂಧಗಳನ್ನು ಕಡೆಗಣಿಸಬಾರದು. ಮಕ್ಕಳಲ್ಲಿ ಮಾನವೀಯ ಮೌಲ್ಯಗಳು ಮತ್ತು ಹಿರಿಯರ ಬಗ್ಗೆ ಗೌರವ ಬೆಳೆಸಬೇಕು ಎಂದು ತಿಳಿಸಿದರು.

ಪ್ರತಿ ವರ್ಷ ಸಂಕ್ರಾಂತಿ ಸೇರಿದಂತೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಸಾಮೂಹಿಕವಾಗಿ ಆಚರಿಸುವ ಮೂಲಕ ಸಮಾಜದ ಒಗ್ಗಟ್ಟನ್ನು ಇನ್ನಷ್ಟು ಬಲಪಡಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಗಳಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು. ನಿವೃತ್ತ ನೌಕರರು, ದಾನಿಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಗಣ್ಯರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ವೀರಣ್ಣ ಶೆಟ್ಟರ, ಜಿ.ಎ. ಬೆಲ್ಲದ, ಬಸವರಾಜ ವಂಕಲಕುಂಟಿ, ಸಿ.ವಿ. ವಂಕಲಕುಂಟಿ, ಮುತ್ತಣ್ಣ ಸಂಗಳದ, ನಾಗೇಶ ಸವಡಿ, ಉಮೇಶ ಮೆಣಸಗಿ, ಡಾ. ಶಶಿಕಲಾ ಅಂಗಡಿ, ವಿಶ್ವನಾಥ ಮಳಗಿ, ಕಪ್ಪತಪ್ಪ ಅಂಗಡಿ, ಶಿವಾನಂದ ಯಾವಗಲ್ಲ, ಮಂಜುನಾಥ ಸಂಗಳದ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಗೀತಾ ಭೋಪಳಾಪೂರ ಸಂಗೀತ ಸೇವೆ ನೀಡಿದರು.

ಜ್ಯೋತಿ ವಂಕಲಕುಂಟಿ ಪ್ರಾರ್ಥಿಸಿದರು. ಸಂಗಮೇಶ ಹೂಲಗೇರಿ ಸ್ವಾಗತಿಸಿದರು. ಬಸಪ್ಪ ಸಂಗಳದ ಕಾರ್ಯಕ್ರಮ ನಿರೂಪಿಸಿದರು.

# ಗದಗ ಉತ್ಸವಕ್ಕೆ ಬ್ಯಾಂಕುಗಳ ಸಹಕಾರ ಕೋರಿದ ಸಮಿತಿ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಉತ್ಸವ2026ರ ಯಶಸ್ವಿ ಆಯೋಜನೆಗೆ ವಿವಿಧ ವಲಯಗಳ ಸಹಕಾರ ಕೋರಲು ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆ ಹಾಗೂ ಗದಗ ಉತ್ಸವ2026 ಸಮಿತಿ ಪದಾಧಿಕಾರಿಗಳು ಸೋಮವಾರ ಜಿಲ್ಲೆಯ ವಿವಿಧ ಬ್ಯಾಂಕುಗಳಿಗೆ ಭೇಟಿ ನೀಡಿ ಉತ್ಸವದಲ್ಲಿ ಸಕ್ರಿಯವಾಗಿ ಭಾಗವಹಿಸುವಂತೆ ಮನವಿ ಮಾಡಿದರು.

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ, ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಸಿಕಟ್ಟಿ, ಉಪಾಧ್ಯಕ್ಷ ಜಯದೇವ್ ಮೆಣಸಗಿ ಹಾಗೂ ಗದಗ ಉತ್ಸವ2026 ಸಮಿತಿಯ ಅಧ್ಯಕ್ಷ ಮಧುಸೂದನ ಪುಣೇಕರ ಅವರು ಬ್ಯಾಂಕ್ ಅಧಿಕಾರಿಗಳೊಂದಿಗೆ ಮಾತುಕತೆ ನಡೆಸಿ, ಉತ್ಸವದ ಯಶಸ್ಸಿಗೆ ಅಗತ್ಯ ಸಹಕಾರ ನೀಡುವಂತೆ ಕೋರಿದರು.

ಗದಗ ಉತ್ಸವವು ಜಿಲ್ಲೆಯ ಸಾಂಸ್ಕೃತಿಕ, ವಾಣಿಜ್ಯ ಹಾಗೂ ಸಾಮಾಜಿಕ ಬೆಳವಣಿಗೆಗೆ ಪೂರಕವಾಗಿದ್ದು, ಜಿಲ್ಲೆಯ ಎಲ್ಲ ವಲಯಗಳ ಸಹಭಾಗಿತ್ವದಿಂದ ಉತ್ಸವವನ್ನು ಯಶಸ್ವಿಗೊಳಿಸಲು ಬ್ಯಾಂಕುಗಳು ಸಹ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

# ಚನ್ನಮ್ಮ ದೇವೇಗೌಡ ನಿಧನಕ್ಕೆ ಸಂತಾಪ



**ವಿಜಯಸಾಕ್ಷಿ ಸುದ್ದಿ, ಗದಗ**

ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರ ಧರ್ಮಪತ್ನಿ ಚನ್ನಮ್ಮ ದೇವೇಗೌಡ ಅವರ ನಿಧನಕ್ಕೆ ಗದಗ ಜಿಲ್ಲಾ ಎಚ್.ಡಿ. ಕುಮಾರಸ್ವಾಮಿ ಅಭಿಮಾನಿ ಬಳಗದ ಜಿಲ್ಲಾ ಅಧ್ಯಕ್ಷ ಬಸವರಾಜ ಜಕ್ಕಪ್ಪನವರ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಚನ್ನಮ್ಮ ದೇವೇಗೌಡ ಅವರು ಕಾರ್ಯಕರ್ತರು ಹಾಗೂ ಮನೆಗೆ ಬಂದ ಪ್ರತಿಯೊಬ್ಬರನ್ನೂ ತಾಯಿಯ ಪ್ರೀತಿಯಿಂದ ಕಾಣುತ್ತಿದ್ದ ಅಪರೂಪದ ವ್ಯಕ್ತಿತ್ವ ಹೊಂದಿದ್ದರು. ಅವರಂತಹ ತಾಯಿ ಹೃದಯದ ಮಹಿಳೆಯರು ಪ್ರತಿಯೊಂದು ಮನೆಯಲ್ಲಿ ಹುಟ್ಟಲಿ. ಭಗವಂತರು ಅವರ ಆತ್ಮಕ್ಕೆ ಚಿರಶಾಂತಿ ನೀಡಲಿ ಎಂದು ಅವರು ಪ್ರಾರ್ಥಿಸಿದರು.

ಮಾಜಿ ಮುಖ್ಯಮಂತ್ರಿ ಹಾಗೂ ಕೇಂದ್ರ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ, ಮಾಜಿ ಸಚಿವ ಎಚ್.ಡಿ. ರೇವಣ್ಣ, ಭವಾನಿ ರೇವಣ್ಣ, ಅನಿತಾ ಕುಮಾರಸ್ವಾಮಿ, ನಿಖಿಲ್ ಕುಮಾರಸ್ವಾಮಿ ಸೇರಿದಂತೆ ದೇವೇಗೌಡ ಕುಟುಂಬಕ್ಕೆ ಈ ದುಃಖವನ್ನು ಭರಿಸುವ ಶಕ್ತಿ ನೀಡುವಂತೆ ದೇವರಲ್ಲಿ ಪ್ರಾರ್ಥಿಸುವುದಾಗಿ ಹೇಳಿದರು. ಈ ಸಂದರ್ಭದಲ್ಲಿ ನಡೆದ ಶ್ರದ್ಧಾಂಜಲಿ ಸಭೆಯಲ್ಲಿ ಎರಡು ನಿಮಿಷ ಮೌನಾಚರಣೆ ನಡೆಸಲಾಯಿತು.

ಸಭೆಯಲ್ಲಿ ದಾವಲ್ ಎಂ. ಮುಳಗುಂದ, ಬಸವರಾಜ ದೇಸಾಯಿ, ಸುರೇಶ್ ರಾಮೇನಹಳ್ಳಿ ಸೇರಿದಂತೆ ಎಚ್.ಡಿ. ಕುಮಾರಸ್ವಾಮಿ ಅಭಿಮಾನಿ ಬಳಗದ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

### ಕರ್ನಾಟಕ ಪ್ರತಿಭಾ ಅಕಾಡೆಮಿ ವತಿಯಿಂದ ಪ್ರತಿಭಾ ಪುರಸ್ಕಾರ ಸಮಾರಂಭದಲ್ಲಿ ಅಭಿಮತ

# ದೊಡ್ಡ ಗುರಿ ಇಟ್ಟುಕೊಂಡು ಸಾಧನೆಯತ್ತ ಮುನ್ನಡೆಯಿರಿ



**ವಿಜಯಸಾಕ್ಷಿ ಸುದ್ದಿ, ಗದಗ**

ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ಸಣ್ಣ ಗುರಿಗಳಿಗೆ ಸೀಮಿತವಾಗದೆ ದೊಡ್ಡ ಗುರಿಯನ್ನು ಇಟ್ಟುಕೊಂಡು ನಿರಂತರ ಪರಿಶ್ರಮದಿಂದ ಮುನ್ನಡೆಯಬೇಕು ಎಂದು ಗದಗ ಜಿಲ್ಲಾ ಕಾಂಗ್ರೆಸ್ ಘಟಕದ (ಪರಿಶಿಷ್ಟ ಜಾತಿ)ಅಧ್ಯಕ್ಷರು ಹಾಗೂ ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯ ಬಸವರಾಜ ಕಡೆಮನಿ ಹೇಳಿದರು.

ನಗರದ ಬಸವೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಕರ್ನಾಟಕ ಪ್ರತಿಭಾ ಅಕಾಡೆಮಿ ವತಿಯಿಂದ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಸಮಾಜದಲ್ಲಿ ಸಾಮಾಜಿಕ, ಶೈಕ್ಷಣಿಕ ಹಾಗೂ ಇತರೆ ಎಲ್ಲ ಕ್ಷೇತ್ರಗಳಲ್ಲೂ ಸ್ಪರ್ಧೆ ಹೆಚ್ಚಾಗಿದ್ದು, ವಿದ್ಯಾರ್ಥಿಗಳು ಆತ್ಮವಿಶ್ವಾಸದಿಂದ ತಮ್ಮ ಗುರಿ ಸಾಧನೆಯತ್ತ ಹೆಜ್ಜೆ ಹಾಕಬೇಕು ಎಂದು ಸಲಹೆ ನೀಡಿದರು.

ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕರ್ನಾಟಕ ಸರಕಾರಿ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷ ಹಾಗೂ ಗದಗ ಘಟಕದ ಜಿಲ್ಲಾ ಅಧ್ಯಕ್ಷ ಇ. ಬಸವರಾಜ ಬಳ್ಳಾರಿ ಮಾತನಾಡಿ, ಭಾರತೀಯ ಸಂವಿಧಾನವು ಎಲ್ಲ ವರ್ಗದ ವಿದ್ಯಾರ್ಥಿಗಳಿಗೆ ಸಮಾನ ಶಿಕ್ಷಣದ ಅವಕಾಶ ಕಲ್ಪಿಸಿದೆ. ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರ ಕೊಡುಗೆಯನ್ನು ವಿದ್ಯಾರ್ಥಿಗಳು ಎಂದಿಗೂ ಮರೆಯಬಾರದು. ಗುರಿ ತಲುಪುವವರೆಗೆ ನಿರಂತರ ಪರಿಶ್ರಮವೇ ಯಶಸ್ಸಿನ ಮಂತ್ರ ಎಂದು ಹೇಳಿದರು.

ಉಪನ್ಯಾಸಕರಾಗಿ ಆಗಮಿಸಿದ್ದ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ನಿವೃತ್ತ ಪ್ರಾಚಾರ್ಯ ಡಿ.ಜಿ. ಜೋಗಣ್ಣವರ ಮಾತನಾಡಿ, ಸಂವಿಧಾನದ ಮೌಲ್ಯಗಳನ್ನು ಅರ್ಥೈಸಿಕೊಂಡು ಬದುಕಬೇಕು. ವಿದ್ಯಾರ್ಥಿಗಳು ತಂದೆ-ತಾಯಿ, ಗುರು-ಹಿರಿಯರಿಗೆ ಗೌರವ ನೀಡುವ ಮೂಲಕ ಆದರ್ಶ ವ್ಯಕ್ತಿಗಳಾಗಿ ಬೆಳೆಯಬೇಕು ಎಂದು ಕರೆ ನೀಡಿದರು. ರವಿ ಹಾದಿಮನಿ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆ ಬಸವರಾಜ ಈರಣ್ಣವರ ವಹಿಸಿದ್ದರು. ಈ ಸಂದರ್ಭದಲ್ಲಿ 2025 ಹಾಗೂ 2026ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಗದಗ ಜಿಲ್ಲೆಯ ಏಳು ತಾಲೂಕುಗಳ ತಲಾ 10 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ

> **ಸ್ಪರ್ಧಾತ್ಮಕ ಯುಗದಲ್ಲಿ ವಿದ್ಯಾರ್ಥಿಗಳು ದೊಡ್ಡ ಗುರಿ ಇಟ್ಟುಕೊಂಡು ನಿರಂತರ ಪರಿಶ್ರಮದಿಂದ ಮುನ್ನಡೆಯಬೇಕು. ಆಗ ಮಾತ್ರ ಯಶಸ್ಸು ಸಾಧ್ಯ.**
>
> **- ಬಸವರಾಜ ಕಡೆಮನಿ, ಅಧ್ಯಕ್ಷರು,** ಗದಗ ಜಿಲ್ಲಾ (ಪರಿಶಿಷ್ಟ ಜಾತಿ ವಿಭಾಗ) ಕಾಂಗ್ರೆಸ್ ಘಟಕ

ಸನ್ಮಾನಿಸಲಾಯಿತು. ಕಾರ್ಯಕ್ರಮದ ಆರಂಭದಲ್ಲಿ ಎಲ್ಲ ಅತಿಥಿಗಳು ಹಾಗೂ ವಿದ್ಯಾರ್ಥಿಗಳು ಸಂವಿಧಾನದ ಪೀಠಿಕೆ ಓದಿದರು. ಹುಯಿಲಗೋಳ ಗ್ರಾಮದ ಜೇನುಗೂಡು ಜಾನಪದ ಕಲಾ ತಂಡ ಕ್ರಾಂತಿ ಗೀತೆಗಳು ಹಾಗೂ ಹೋರಾಟದ ಹಾಡುಗಳನ್ನು ಪ್ರಸ್ತುತಪಡಿಸಿತು. ಶಿವಾನಂದ ಗೋಗೇರಿ ಸ್ವಾಗತಿಸಿದರು. ಭೀಮಣ್ಣ ಪ್ರಾಸ್ತಾವಿಕವಾಗಿ ಮಾತನಾಡಿದರು. ಸೋಮಣ್ಣ ಎತ್ತಿನಹಳ್ಳಿ ಕಾರ್ಯಕ್ರಮ ನಿರೂಪಿಸಿದರೆ, ಬಾಬು ಚಲುವಾದಿ ವಂದಿಸಿದರು. ವೇದಿಕೆಯಲ್ಲಿ ಸೂರ್ಯಪ್ರಕಾಶ್ ನಾಯ್ಕರ, ಶೋಭಾ ಅಸುಂಡಿ, ಬಸವರಾಜ ಮಾದರ, ಗಾಳೆಪ್ಪ ಹರಿಜನ, ಶಿವಾನಂದ ಸಿಂಗಾಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ರಂಗಮಂದಿರ ನಿರ್ಮಾಣಕ್ಕೆ ಮನವಿ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಸಮಸ್ತ ರಂಗ ಕಲಾವಿದರಿಗೆ ಅನುಕೂಲವಾಗುವಂತೆ ಹಗರಿಬೊಮ್ಮನಹಳ್ಳಿಯಲ್ಲಿ ಸುಸಜ್ಜಿತ ರಂಗಮಂದಿರ ಹಾಗೂ ಅದಕ್ಕೆ ಹೊಂದಿಕೊಂಡ ಸಮುದಾಯ ಭವನ ನಿರ್ಮಿಸಿಕೊಡುವಂತೆ ಶಾಸಕ ಕೆ. ನೇಮರಾಜ ನಾಯ್ಕ್ ಅವರಿಗೆ ಹಳೆ ಕಲಾವಿದರ ಸಂಘ ಮನವಿ ಸಲ್ಲಿಸಿದೆ.

ಪಟ್ಟಣದ ನೀರಾವರಿ ಇಲಾಖೆಯ ಆವರಣದಲ್ಲಿ ರಂಗಮಂದಿರ ಹಾಗೂ ಸಮುದಾಯ ಭವನ ನಿರ್ಮಿಸಿದರೆ ಸುಮಾರು 25 ವರ್ಷಗಳಿಂದ ಕಲಾವಿದರು ಕಂಡಿರುವ ಕನಸು ನನಸಾಗಲಿದೆ. ಇದರಿಂದ ರಂಗಭೂಮಿ ಚಟುವಟಿಕೆಗಳಿಗೆ ಉತ್ತೇಜನ ದೊರೆಯುವುದರ ಜೊತೆಗೆ ಸ್ಥಳೀಯ ಕಲಾವಿದರಿಗೆ ಶಾಶ್ವತ ವೇದಿಕೆ ಸಿಗಲಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ವಿಶ್ವವಿಖ್ಯಾತ ಹಂಪಿ ವಿಜಯನಗರ ಜಿಲ್ಲೆಯಲ್ಲಿರುವ ಹಿನ್ನೆಲೆಯಲ್ಲಿ, ಈ ಭಾಗದ ಇತಿಹಾಸ, ಸಾಹಿತ್ಯ, ಸಂಸ್ಕೃತಿ ಹಾಗೂ ರಂಗಕಲೆಯ ಬೆಳವಣಿಗೆಗೆ ಇಂತಹ ಸಾಂಸ್ಕೃತಿಕ ಕೇಂದ್ರ ಪೂರಕವಾಗಲಿದೆ ಎಂದು ಸಂಘ ಅಭಿಪ್ರಾಯ ವ್ಯಕ್ತಪಡಿಸಿದೆ.

ಈ ಸಂದರ್ಭದಲ್ಲಿ ನಿವೃತ್ತ ಪಿಡಿಒ ಇ.ಕೆ. ಮೂರ್ತಿ, ರಮೇಶ್ ಅಂಚಿನಮನಿ, ಉಮಾಶಂಕರ್, ಕೆ. ನಾಗರತ್ನ, ಪಿ. ವೆಂಕಟೇಶ್, ಸಿ. ಶಿವಮೂರ್ತಿ, ಸೆಂಚಿ ಶಿವಣ್ಣ, ಕೊಟ್ರೇಶ ಹನಸಿ, ಧನಂಜಯ ಕಣವಿ ನಾಯಕನಹಳ್ಳಿ, ಹೆಚ್. ಮಲ್ಲೇಶಪ್ಪ, ವಿರೂಪಾಕ್ಷಪ್ಪ ಮೋರಿಗೇರಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿಗಳು

### ತಿಮ್ಮಾಪೂರದಲ್ಲಿ 46ನೇ ರೈತ ಹುತಾತ್ಮ ದಿನಾಚರಣೆ ಸರ್ಕಾರದ ವಿರುದ್ಧ ರೈತ ಸಂಘ ಆಕ್ರೋಶ

# ಬರ ಘೋಷಣೆ, ಬೆಳೆ ವಿಮೆ ಬಿಡುಗಡೆಗೆ ರೈತರ ಆಗ್ರಹ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯನ್ನು ತಕ್ಷಣ ಬರಪೀಡಿತ ಪ್ರದೇಶವೆಂದು ಘೋಷಿಸಬೇಕು. 2024-25ನೇ ಸಾಲಿನ ಮುಂಗಾರು ಹಾಗೂ ಹಿಂಗಾರು ಹಂಗಾಮಿನ ಬೆಳೆ ವಿಮೆ ಹಣವನ್ನು ರೈತರ ಖಾತೆಗೆ ಕೂಡಲೇ ಜಮೆ ಮಾಡಬೇಕು. ನಾವು ಪುಕ್ಕಟೆಯಾಗಿ ಏನನ್ನೂ ಕೇಳುತ್ತಿಲ್ಲ, ನಾವು ಕಟ್ಟಿದ ವಿಮೆಯ ಹಣವನ್ನೇ ಕೇಳುತ್ತಿದ್ದೇವೆ. ಸರ್ಕಾರ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಅನಿವಾರ್ಯವಾಗಲಿದೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ವಿ.ಆರ್. ನಾರಾಯಣರೆಡ್ಡಿ ಬಣ) ಆಗ್ರಹಿಸಿತು.

46ನೇ ರೈತ ಹುತಾತ್ಮ ದಿನಾಚರಣೆ ಅಂಗವಾಗಿ ಮಂಗಳವಾರ ಗದಗ ಜಿಲ್ಲೆಯ ತಿಮ್ಮಾಪೂರ ಗ್ರಾಮದಲ್ಲಿ ನಡೆದ ಕಾರ್ಯಕ್ರಮದಲ್ಲಿ ರೈತ ಮುಖಂಡರು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ರೈತ ಸಂಘದ ಗದಗ ಜಿಲ್ಲಾ ಅಧ್ಯಕ್ಷ ಯಲ್ಲಪ್ಪ ಎಚ್. ಬಾಬರಿ, 1980ರ ನವೆಂಬರ್ 21ರಂದು ನವಲಗುಂದ-ನರಗುಂದ ರೈತ ಹೋರಾಟ ಹಾಗೂ ಹಾವೇರಿ ಭಾಗದಲ್ಲಿ ಸರ್ಕಾರದ ಗೋಲಿಬಾರ್‌ಗೆ ಬಲಿಯಾದ ರೈತರನ್ನು ಸ್ಮರಿಸಿದರು. ಹುತಾತ್ಮ ರೈತರ ತ್ಯಾಗವನ್ನು ನೆನೆಯುವ ದಿನವಾಗಿರುವುದರ ಜೊತೆಗೆ ಇದನ್ನು ಕರಾಳ ದಿನವಾಗಿಯೂ ಆಚರಿಸಲಾಗುತ್ತಿದೆ ಎಂದರು.

**ನಾವು ಪುಕ್ಕಟೆಯಾಗಿ ಏನನ್ನೂ ಕೇಳುತ್ತಿಲ್ಲ. ನಾವು ಕಟ್ಟಿದ ಬೆಳೆ ವಿಮೆಯ ಹಣವನ್ನೇ ಕೇಳುತ್ತಿದ್ದೇವೆ. ಸರ್ಕಾರ ಸ್ಪಂದಿಸದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ನಡೆಸಬೇಕಾಗುತ್ತದೆ.**

**- ರೈತ ಮುಖಂಡರು**

ಮುಂಗಾರು ಮಳೆ ಕೈಕೊಟ್ಟ ಪರಿಣಾಮ ಗದಗ ಜಿಲ್ಲೆಯಾದ್ಯಂತ ಬೆಳೆಗಳು ಹಾನಿಗೊಳಗಾಗಿವೆ. ಆದರೂ ಸರ್ಕಾರ ಇನ್ನೂ ಜಿಲ್ಲೆಯನ್ನು ಬರಪೀಡಿತ ಪ್ರದೇಶವೆಂದು ಘೋಷಿಸಿಲ್ಲ ಎಂದು ಅವರು ಆರೋಪಿಸಿದರು.

ರೈತರು ಕಟ್ಟಿರುವ 2024-25ನೇ ಸಾಲಿನ ಮುಂಗಾರು ಹಾಗೂ ಹಿಂಗಾರು ಹಂಗಾಮಿನ ಬೆಳೆ ವಿಮೆ ಹಣವನ್ನು ತಕ್ಷಣ ಬಿಡುಗಡೆ ಮಾಡಬೇಕು. ರೈತ ವಿರೋಧಿ ನೀತಿಗಳನ್ನು ಕೈಬಿಟ್ಟು ಸಂಕಷ್ಟದಲ್ಲಿರುವ ರೈತರ ನೆರವಿಗೆ ಸರ್ಕಾರ ಧಾವಿಸಬೇಕು ಎಂದು ಒತ್ತಾಯಿಸಿದರು. ಕಾರ್ಯಕ್ರಮದಲ್ಲಿ ರೈತ ಸಂಘದ ಪದಾಧಿಕಾರಿಗಳಾದ ಶರಣಪ್ಪ ಜೋಗಿನ, ಬಾಳಪ್ಪ ಗಂಗರಾತ್ರಿ, ಶಿವಪುತ್ರಪ್ಪ ತಿಮ್ಮಾಪೂರ, ಫಕೀರಪ್ಪ ಜೋಗಿನ, ರಾಮಣ್ಣ ಖಂಡ್ರೆ, ಉದಯ ಗಂಗರಾತ್ರಿ, ಹನುಮಪ್ಪ ಹಚ್ಚಪ್ಪನವರ, ಮಲ್ಲಪ್ಪ ಮಡಿವಾಳರ, ಭೀಮನಗೌಡ ಪಾಟೀಲ, ರಾಮಣ್ಣ ಕಂಕರಿ, ಶರಣಪ್ಪ ಹಡಪದ, ಪ್ರಕಾಶ ಬಸಾಪೂರ, ಹೊನ್ನಕೇರಪ್ಪ ಬಿಚಗಲ್ಲ ಸೇರಿದಂತೆ ಗ್ರಾಮಸ್ಥರು ಹಾಗೂ ರೈತರು ಉಪಸ್ಥಿತರಿದ್ದು, ಹುತಾತ್ಮ ರೈತರಿಗೆ ಶ್ರದ್ಧಾಂಜಲಿ ಸಲ್ಲಿಸಿದರು.

## ಬೆಳೆ ವಿಮೆ ನೋಂದಣಿಗೆ ಇಂದು ಕೊನೆಯ ದಿನ

**ವಿಜಯಸಾಕ್ಷಿ ಸುದ್ದಿ, ಗದಗ**

2026-27ನೇ ಸಾಲಿನ ಮುಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ ಅಡಿ ಹೆಸರು (ಮಳೆಯಾಶ್ರಿತ) ಹಾಗೂ ಹತ್ತಿ (ಮಳೆಯಾಶ್ರಿತ ಮತ್ತು ನೀರಾವರಿ) ಬೆಳೆಗಳಿಗೆ ವಿಮೆ ನೋಂದಣಿ ಮಾಡಿಸಲು ಜುಲೈ 22 ಕೊನೆಯ ದಿನವಾಗಿದ್ದು, ಸಾಲ ಪಡೆದ ರೈತರು ಕಡ್ಡಾಯವಾಗಿ ನೋಂದಣಿ ಮಾಡಿಸಿಕೊಳ್ಳುವಂತೆ ಜಿಲ್ಲಾಡಳಿತ ಮನವಿ ಮಾಡಿದೆ.

ಜಿಲ್ಲೆಯಲ್ಲಿ ಪ್ರಸಕ್ತ ಸಾಲಿಗೆ ಇಂಡಸ್‌ಇಂಡ್ ಜನರಲ್ ಇನ್ಶೂರೆನ್ಸ್ ಕಂಪನಿ ಅನುಷ್ಠಾನ ಸಂಸ್ಥೆಯಾಗಿ ಆಯ್ಕೆಯಾಗಿದೆ. ಅಧಿಸೂಚಿತ ಬೆಳೆಗಳಿಗೆ ಬೆಳೆ ಸಾಲ ಪಡೆದ ರೈತರಿಗೆ ಈ ಯೋಜನೆ ಕಡ್ಡಾಯವಾಗಿದೆ.



**ಗದಗ: ಆಷಾಢ ಮಾಸದ ಅಂಗವಾಗಿ ಗದುಗಿನ ಜ. ಪಂಚಾಚಾರ್ಯ ಮಾಂಗಲ್ಯ ಮಂದಿರದಲ್ಲಿ ಗದಗ-ಬೆಟಗೇರಿ ಪಂಚಾಚಾರ್ಯ ಸೇವಾ ಸಂಘ ಆಯೋಜಿಸಿದ್ದ ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಮಾಲಿಕೆ ಕಾರ್ಯಕ್ರಮದಲ್ಲಿ ಶ್ರೀ ಜ್ಞಾನಾಮೃತ ಸಿದ್ಧಾಂತ ಶಿಖಾಮಣಿ ಪಾರಾಯಣ ಬಳಗದ ನಾಗರತ್ನಾ ಹುಬಲಿಮಠ, ಅನ್ನಪೂರ್ಣ ಮಾಳೆಕೊಪ್ಪಮಠ ಅವರ ನೇತೃತ್ವದಲ್ಲಿ ಸದಸ್ಯರು ಪಾರಾಯಣ ನಡೆಸಿದರು.**

### ಸಂಘಟಿತ ಶಕ್ತಿಯಿಂದಲೇ ಸಮಾಜದ ಅಭಿವೃದ್ಧಿ ಬ್ರಾಹ್ಮಣರ ಏಳಿಗೆಗೆ ₹100 ಕೋಟಿ ನಿಧಿ ಗುರಿ: ಎಸ್. ರಘುನಾಥ

# ಬ್ರಾಹ್ಮಣರಿಲ್ಲದೆ ಪರಿಪೂರ್ಣ ಸಮಾಜ ಅಸಾಧ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಯಾವುದೇ ಸಮಾಜದ ಸರ್ವಾಂಗೀಣ ಅಭಿವೃದ್ಧಿ ಹಾಗೂ ಪರಿಪೂರ್ಣ ಸಮಾಜ ನಿರ್ಮಾಣಕ್ಕೆ ಬ್ರಾಹ್ಮಣರ ಮಾರ್ಗದರ್ಶನ ಮತ್ತು ಸಹಕಾರ ಅತ್ಯಗತ್ಯವಾಗಿದೆ ಎಂದು ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆಯ ಅಧ್ಯಕ್ಷ ಎಸ್. ರಘುನಾಥ ಹೇಳಿದರು.

ಗದಗ ಜಿಲ್ಲಾ ಬ್ರಾಹ್ಮಣ ಸಂಘದ ವತಿಯಿಂದ ನಗರದ ಶ್ರೀ ಶಂಕರ ಮಠದಲ್ಲಿ ಆಯೋಜಿಸಿದ್ದ ಪ್ರತಿಭಾ ಪುರಸ್ಕಾರ, ನಿವೃತ್ತರ ಹಾಗೂ ಸಾಧಕರ ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಬ್ರಾಹ್ಮಣ ಸಮಾಜ ವೈಯಕ್ತಿಕವಾಗಿ ಸಾಕಷ್ಟು ಸಾಧನೆ ಮಾಡಿದ್ದರೂ, ಸಂಘಟಿತವಾಗಿ ಇನ್ನಷ್ಟು ಬಲಿಷ್ಠವಾಗಬೇಕಿದೆ. ರಾಜ್ಯದ ಜಿಲ್ಲಾ, ತಾಲೂಕು ಹಾಗೂ ಗ್ರಾಮ ಮಟ್ಟದಲ್ಲಿ ಸಂಘಟನೆಯನ್ನು ಇನ್ನಷ್ಟು ಸದೃಢಗೊಳಿಸಲು ಬೈಲಾ ತಿದ್ದುಪಡಿ ಸೇರಿದಂತೆ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಬ್ರಾಹ್ಮಣ ಸಮಾಜದ ಆರ್ಥಿಕವಾಗಿ ಹಿಂದುಳಿದವರಿಗೆ ಶಿಕ್ಷಣ, ಆರೋಗ್ಯ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ನೆರವು ನೀಡುವ ಉದ್ದೇಶದಿಂದ ₹100 ಕೋಟಿ ನಿಧಿ ಸಂಗ್ರಹಿಸುವ ಗುರಿಯನ್ನು ಮಹಾಸಭೆ ಹೊಂದಿದೆ ಎಂದು ಹೇಳಿದರು.



ಕರ್ನಾಟಕ ಬ್ರಾಹ್ಮಣ ಅಭಿವೃದ್ಧಿ ಮಂಡಳಿಯ ಅಧ್ಯಕ್ಷ ಆಸುಗೋಡ ಜಯಸಿಂಹ ಮಾತನಾಡಿ, ಬ್ರಾಹ್ಮಣ ಸಮಾಜದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ, ನಿರುದ್ಯೋಗಿ ಯುವಕರಿಗೆ ಸ್ವಯಂ ಉದ್ಯೋಗ ಹಾಗೂ ವ್ಯಾಪಾರ ಆರಂಭಿಸಲು ಸಾಲ ಸೇರಿದಂತೆ ವಿವಿಧ ಯೋಜನೆಗಳನ್ನು ಜಾರಿಗೊಳಿಸಲಾಗಿದೆ. ಗದಗ ಜಿಲ್ಲೆಯಲ್ಲಿ ಈಗಾಗಲೇ 56ಕ್ಕೂ ಹೆಚ್ಚು ಯುವಕರಿಗೆ ಟಿವಿಪ್ರ ಸಾಲಟಿ ಮಂಜೂರಾಗಿದೆ ಎಂದು ತಿಳಿಸಿದರು.

ರಾಜ್ಯ ಸಚಿವ ಸಂಪುಟದಲ್ಲಿ ಬ್ರಾಹ್ಮಣ ಸಮುದಾಯಕ್ಕೆ ಕನಿಷ್ಠ ಒಬ್ಬರಿಗೆ ಸಚಿವ ಸ್ಥಾನ ನೀಡಬೇಕು ಎಂದು ಅವರು ಆಗ್ರಹಿಸಿದರು.

**ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಬ್ರಾಹ್ಮಣರ ಮಾರ್ಗದರ್ಶನ ಮತ್ತು ಸಂಘಟಿತ ಶಕ್ತಿ ಅಗತ್ಯ. ಒಗ್ಗಟ್ಟಿನಿಂದ ಸಮಾಜವನ್ನು ಇನ್ನಷ್ಟು ಬಲಿಷ್ಠಗೊಳಿಸಬೇಕು.**

**- ಎಸ್. ರಘುನಾಥ**, ಅಧ್ಯಕ್ಷರು, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆ

ಅಧ್ಯಕ್ಷತೆ ವಹಿಸಿದ್ದ ಗದಗ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ವೆಂಕಟೇಶ್ ಕುಲಕರ್ಣಿ ಸಂಘದ ಕಾರ್ಯಚಟುವಟಿಕೆಗಳು ಹಾಗೂ ಮುಂದಿನ ಯೋಜನೆಗಳ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದರು.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆಯ ಜಿಲ್ಲಾ ಪ್ರತಿನಿಧಿ ಶ್ರೀನಿವಾಸ ಹುಯಿಲಗೋಳ, ಬ್ರಾಹ್ಮಣ ಅಭಿವೃದ್ಧಿ ಮಂಡಳಿ ನಿರ್ದೇಶಕ ಗುರಣ್ಣ ಬಳಗಾನೂರ ಸೇರಿದಂತೆ ಹಲವು ಗಣ್ಯರು ಸಮಾಜದ ಅಭಿವೃದ್ಧಿ ಯೋಜನೆಗಳ ಕುರಿತು ಮಾತನಾಡಿದರು.

ಕಾರ್ಯಕ್ರಮವು ಗದಗ-ಬೆಟಗೇರಿ ಬ್ರಹ್ಮವೃಂದದ ವೇದಘೋಷದೊಂದಿಗೆ ಆರಂಭಗೊಂಡಿತು. ಡಾ. ವೆಂಕಟೇಶ್ ಕುಲಕರ್ಣಿ ಭಕ್ತಿ ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರೆ, ನಂತರ ಪ್ರೊ. ಅನಿಲ್ ವೈದ್ಯ ಹಾಗೂ ಅರುಣ ಕುಲಕರ್ಣಿ ಅವರಿಂದ ಹಾಸ್ಯ ಕಾರ್ಯಕ್ರಮ ನಡೆಯಿತು.

### ಸಾಧಕರಿಗೆ ಸನ್ಮಾನ, ಪ್ರತಿಭಾವಂತರಿಗೆ ಪುರಸ್ಕಾರ

ಸಮಾರಂಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಕಿತ್ತೂರು ಕರ್ನಾಟಕ ದಿನಪತ್ರಿಕೆಯ ಸಂಪಾದಕ ಎಂ.ಜಿ. ಕುಲಕರ್ಣಿ, ರೆಡ್‌ಕ್ರಾಸ್ ಅಧ್ಯಕ್ಷ ಡಾ. ಆರ್.ಎನ್. ಗೋಡಬೋಲೆ, ಗಮಕ ಕಲಾಶ್ರೀ ಪ್ರಶಸ್ತಿ ಪುರಸ್ಕೃತ ವಿಶ್ವನಾಥ ಕುಲಕರ್ಣಿ, ಕೀರ್ತನಕಾರ ದಿಗಂಬರಶಾಸ್ತ್ರಿ ಕುರ್ತಕೋಟಿ, ಎ.ಕೆ. ತಮ್ಮಣ್ಣವರ, ಜ್ಯೋತಿಷ್ಯರತ್ನ ಪ್ರಶಸ್ತಿ ಪುರಸ್ಕೃತ ಶ್ರೀಪಾದನಾಯಕ ತಮ್ಮಣ್ಣವರ ಸೇರಿದಂತೆ ಹಲವು ಗಣ್ಯರನ್ನು ಸನ್ಮಾನಿಸಲಾಯಿತು.

ಅಲ್ಲದೆ, ಯುವ ಸಾಧಕರಾದ ಐಶ್ವರ್ಯ ಹೂಲಿ, ಹನಮಂತರಾವ್ ಕುಲಕರ್ಣಿ, ಕೃತಿಕಾ ಸಾಹುಕಾರ, ಅನಘಾ ಕುಲಕರ್ಣಿ, ಸಮೀರ ದೇಸಾಯಿ ಸೇರಿದಂತೆ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಯಿತು.

### ಶ್ರೀ ಸಾಯಿ ಸಚ್ಚರಿತ್ರೆ ಪ್ರವಚನ ಮಾಲಿಕೆಯಲ್ಲಿ ಭಕ್ತಿ, ಸೇವೆ ಮತ್ತು ಪಂಚಮಹಾಯಜ್ಞಗಳ ಮಹತ್ವದ ಕುರಿತು ಉಪನ್ಯಾಸ

# ಸಾಯಿಬಾಬಾರವರ ತತ್ವಗಳು ಇಂದಿಗೂ ಪ್ರಸ್ತುತ



**ವಿಜಯಸಾಕ್ಷಿ ಸುದ್ದಿ, ಗದಗ**

ಶಿರಡಿ ಸಾಯಿಬಾಬಾರವರ ಕೃಪೆ, ಮಹಿಮೆ ಹಾಗೂ ಜೀವನ ಸಂದೇಶಗಳು ಇಂದಿನ ಸಮಾಜಕ್ಕೂ ಸಮಾನವಾಗಿ ಪ್ರಸ್ತುತವಾಗಿದ್ದು, ನಿಶ್ಚಲ ಭಕ್ತಿಯೇ ಆತ್ಮಶಾಂತಿ ಹಾಗೂ ಮೋಕ್ಷದತ್ತ ಕೊಂಡೊಯ್ಯುವ ಮಾರ್ಗ ಎಂದು ವೈದ್ಯ ಹಾಗೂ ಚಿಂತಕ ಡಾ. ಎಸ್.ಬಿ. ಶೆಟ್ಟರ ಹೇಳಿದರು.

ನಗರದ ಶಿರಡಿ ಸಾಯಿಬಾಬಾ ಮಂದಿರದಲ್ಲಿ ಗದಗ-ಬೆಟಗೇರಿ ಶ್ರೀ ಶಿರಡಿ ಸಾಯಿಬಾಬಾ ಸತ್ಸಂಗ (ರಿ) ವತಿಯಿಂದ ಗುರುಪೂರ್ಣಿಮೆ ಉತ್ಸವದ ಅಂಗವಾಗಿ ಆಯೋಜಿಸಿದ್ದ ಟಿಶ್ರೀ ಸಾಯಿ ಸಚ್ಚರಿತ್ರೆಟಿ ಪ್ರವಚನ ಮಾಲಿಕೆಯಲ್ಲಿ ಅವರು ಮಾತನಾಡಿದರು.

ಸಾಯಿಬಾಬಾರವರ ಜೀವನದಲ್ಲಿನ ಪವಾಡಗಳು ಕೇವಲ ಅಲೌಕಿಕ ಘಟನೆಗಳಲ್ಲ, ಅವು ಭಕ್ತಿ, ನಂಬಿಕೆ, ಕರುಣೆ ಹಾಗೂ ಸರ್ವಜೀವಿಗಳಲ್ಲಿ ದೇವರನ್ನು ಕಾಣುವ ಆಧ್ಯಾತ್ಮಿಕ ಸಂದೇಶಗಳಾಗಿವೆ ಎಂದು ಹೇಳಿದರು. ಮಾನವನಿಂದ ತಿಳಿದೋ ತಿಳಿಯದೆಯೋ ಆಗುವ ದೋಷಗಳಿಗೆ ಪ್ರಾಯಶ್ಚಿತ್ತವಾಗಿ ಆಚರಿಸುವ ಪಂಚಮಹಾಯಜ್ಞಗಳ ಮಹತ್ವವನ್ನು ವಿವರಿಸಿದ ಅವರು, ಬ್ರಹ್ಮಯಜ್ಞ, ಪಿತೃಯಜ್ಞ, ದೇವತಾಯಜ್ಞ, ಭೂತಯಜ್ಞ ಹಾಗೂ ಮನುಷ್ಯಯಜ್ಞಗಳ ಆಚರಣೆಯ ಅಗತ್ಯವನ್ನು ತಿಳಿಸಿದರು. ಅತಿಥಿಯನ್ನು ಗೌರವಿಸುವುದು ಧರ್ಮದ ಪ್ರಮುಖ ಅಂಗವಾಗಿದ್ದು, ಅದನ್ನು ನಿರ್ಲಕ್ಷಿಸುವುದು ಶಾಸ್ತ್ರಗಳ ಪ್ರಕಾರ ತಪ್ಪು ಎಂದು ಹೇಳಿದರು.

ಸಾಯಿಬಾಬಾರವರ ಆರಾಧನೆಯಲ್ಲಿ ಕೇವಲ ಆಚರಣೆಗಳಿಗಿಂತ ಅಚಲ ಭಕ್ತಿಗೆ ಹೆಚ್ಚಿನ ಮಹತ್ವವಿದೆ. ಭಕ್ತಿಭಾವದಿಂದ ಸೇವೆ ಸಲ್ಲಿಸುವವರಿಗೆ ಜ್ಞಾನ, ಆತ್ಮಶಾಂತಿ ಹಾಗೂ ಪರಮಾನಂದ ಲಭಿಸುತ್ತದೆ. ನ್ಯಾಯ, ಮೀಮಾಂಸೆ ಅಥವಾ ವೇದಾಂತ ಅಧ್ಯಯನಕ್ಕಿಂತ ಸಾಯಿಬಾಬಾರವರ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದೇ ನಿಜವಾದ ಮೋಕ್ಷದ ಮಾರ್ಗ ಎಂದು ಅಭಿಪ್ರಾಯಪಟ್ಟರು.

**ಸಾಯಿಬಾಬಾರವರ ತತ್ವಗಳು ಭಕ್ತಿ, ಕರುಣೆ ಮತ್ತು ಸೇವೆಯ ಸಂದೇಶ ಸಾರುತ್ತವೆ. ಅವುಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದೇ ನಿಜವಾದ ಆಧ್ಯಾತ್ಮಿಕ ಸಾಧನೆ.**

**- ಡಾ. ಎಸ್.ಬಿ. ಶೆಟ್ಟರ**

ಪ್ರವಚನದ ಕೊನೆಯಲ್ಲಿ ದ್ವಾರಕಾಮಾಯಿಯಲ್ಲಿದ್ದ ತೂಗುಮಂಚದ ಮೇಲೆ ಸಾಯಿಬಾಬಾರವರು ವಿಶ್ರಾಂತಿ ಪಡೆಯುತ್ತಿದ್ದ ಪ್ರಸಂಗವನ್ನು ಉಲ್ಲೇಖಿಸಿ, ಅದು ಸಿದ್ಧಪುರುಷರ ಯೋಗಸಿದ್ಧಿಯ ಸಂಕೇತವಾಗಿದೆ ಎಂದು ವಿವರಿಸಿದರು.

ಈ ಸಂದರ್ಭದಲ್ಲಿ ವಾಯು ಸಾಯಿಪ್ರಸಾದ ಶೆಟ್ಟರ, ರವಿಪ್ರಕಾಶ ರೆಡ್ಡಿ ಹಾಗೂ ಸಿದ್ಧಲಿಂಗಪ್ಪ ಪಟ್ಟಣಶೆಟ್ಟಿ ಅವರನ್ನು ಪ್ರಸಾದ ಸೇವಾರ್ಥಿಗಳಾಗಿ ಸನ್ಮಾನಿಸಲಾಯಿತು.

ಮಹೇಶಗೌಡ ತಲೇಗೌಡ್ರ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಅಮೃತವಾಲಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು. ಸತ್ಸಂಗ ಸಮಿತಿಯ ಪದಾಧಿಕಾರಿಗಳು ಹಾಗೂ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

### ಜನ ಜಾಗೃತಿ ಧರ್ಮ ಸಮಾರಂಭದಲ್ಲಿ ಆಧ್ಯಾತ್ಮ, ಸಚ್ಚಾರಿತ್ರ್ಯ ಮತ್ತು ಮಾನವೀಯ ಮೌಲ್ಯಗಳ ಮಹತ್ವದ ಕುರಿತು ಆಶೀರ್ವಚನ

# ಗುಣವಿದ್ದಲ್ಲಿ ಭಗವಂತನ ಕೃಪೆ ಸದಾ ಇರುತ್ತದೆ



**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಹಣದ ಜೊತೆಗೆ ಜನ ಇರಬಹುದು. ಆದರೆ ಉತ್ತಮ ಗುಣಗಳ ಜೊತೆಗೆ ಭಗವಂತ ಸದಾ ಇರುತ್ತಾನೆ ಎಂದು ಶ್ರೀ ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದ ಜಗದ್ಗುರು ಡಾ. ವೀರಸೋಮೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ನಗರದ ಜೆ.ಪಿ.ನಗರದ ಶ್ರೀ ಸೋಮೇಶ್ವರ ಸಭಾಭವನದಲ್ಲಿ ವೀರಶೈವ ಲಿಂಗಾಯತ ಸಂಗಮ ಆಯೋಜಿಸಿದ್ದ ಜನ ಜಾಗೃತಿ ಧರ್ಮ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ವ್ಯಕ್ತಿತ್ವ ವಿಕಸನಕ್ಕೆ ಸದ್ಗುಣ, ಸಚ್ಚಾರಿತ್ರ್ಯ ಮತ್ತು ಹೃದಯ ಶ್ರೀಮಂತಿಕೆ ಅತ್ಯಗತ್ಯ. ಶಾಂತಿ ಮತ್ತು ಸಂತೋಷದ ಬದುಕಿಗೆ ಆಧ್ಯಾತ್ಮದ ಅರಿವು ಬೇಕು. ನಮಗೆ ಹೇಗೆ ಸುಖ-ಸಂತೋಷ ಬೇಕೋ ಅದೇ ರೀತಿಯ ಭಾವನೆ ಇತರರ ಮೇಲೂ ಇರಬೇಕು ಎಂಬುದೇ ನಿಜವಾದ ಧರ್ಮ ಎಂದು ಹೇಳಿದರು.

ಕೈಲಾಸಕ್ಕಿಂತ ಕಾಯಕ, ಧರ್ಮಕ್ಕಿಂತ ದಯೆ, ಅರಿವಿಗಿಂತ ಆಚಾರ, ಅಧಿಕಾರಕ್ಕಿಂತ ಅಭಿಮಾನ ಹಾಗೂ ಭೌತಿಕ ಆಸ್ತಿಗಿಂತ ಆರೋಗ್ಯವೇ ಶ್ರೇಷ್ಠ ಎಂಬ ಶ್ರೀ ಜಗದ್ಗುರು ರೇಣುಕಾಚಾರ್ಯರ ಬೋಧನೆಯನ್ನು ಸ್ಮರಿಸಿದ ಅವರು, ಜೀವನದಲ್ಲಿ ಮೌಲ್ಯಗಳಿಗೆ ಆದ್ಯತೆ ನೀಡಬೇಕು ಎಂದು ಕರೆ ನೀಡಿದರು.

**ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಬ್ರಾಹ್ಮಣರ ಮಾರ್ಗದರ್ಶನ ಮತ್ತು ಸಂಘಟಿತ ಶಕ್ತಿ ಅಗತ್ಯ. ಒಗ್ಗಟ್ಟಿನಿಂದ ಸಮಾಜವನ್ನು ಇನ್ನಷ್ಟು ಬಲಿಷ್ಠಗೊಳಿಸಬೇಕು.**

**- ಎಸ್. ರಘುನಾಥ**, ಅಧ್ಯಕ್ಷರು, ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭೆ

ಕಾರ್ಯಕ್ರಮ ಉದ್ಘಾಟಿಸಿದ ಬೆಂಗಳೂರು ದಕ್ಷಿಣ ಕ್ಷೇತ್ರದ ಶಾಸಕ ಎಂ. ಕೃಷ್ಣಪ್ಪ ಮಾತನಾಡಿ, ಗುರು ಕರುಣೆಯೇ ಬದುಕಿನ ಯಶಸ್ಸಿಗೆ ಮೂಲ.

ಗುರು ಮತ್ತು ಗುರಿ ಎರಡನ್ನೂ ಹೊಂದಿದಾಗ ಮಾತ್ರ ಜೀವನ ಸಾರ್ಥಕವಾಗುತ್ತದೆ ಎಂದು ಹೇಳಿದರು.

ಎಡೆಯೂರು ಕ್ಷೇತ್ರದ ರೇಣುಕ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಸಮಯದ ಸದ್ಬಳಕೆ ಮಾಡುವವರು ಮಾತ್ರ ಜೀವನದಲ್ಲಿ ಯಶಸ್ಸು ಕಾಣುತ್ತಾರೆ. ಹಣಕ್ಕಿಂತ ಉತ್ತಮ ಹೆಸರು ಶಾಶ್ವತವಾದ ಸಂಪತ್ತು ಎಂದು ತಿಳಿಸಿದರು.

ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು, ದೊಡ್ಡಗುಣಿ ಕ್ಷೇತ್ರದ ರೇವಣಸಿದ್ಧೇಶ್ವರ ಶಿವಾಚಾರ್ಯರು ಹಾಗೂ ಸಂಗೊಳ್ಳಿ ಹಿರೇಮಠದ ಗುರುಲಿಂಗ ಶಿವಾಚಾರ್ಯರು ವೀರಶೈವ ಧರ್ಮದ ಮೌಲ್ಯಗಳ ಕುರಿತು ಉಪನ್ಯಾಸ ನೀಡಿದರು.

ಇದೇ ಸಂದರ್ಭದಲ್ಲಿ ಶ್ರೀ ಮದ್ವೀರಶೈವ ಸದ್ಬೋಧನ ಸಂಸ್ಥೆಯ ಬೆಂಗಳೂರು ಜಿಲ್ಲಾ ಘಟಕದ ಅಧ್ಯಕ್ಷರಾಗಿ ಉದ್ಯಮಿ ಹಾಗೂ ಮಮತಾ ಫೈನಾನ್ಸ್ ಸಂಸ್ಥೆಯ ಮುಖ್ಯಸ್ಥ ಎಂ. ಮಾದಯ್ಯ ಅವರನ್ನು ಜಗದ್ಗುರುಗಳು ನೇಮಕ ಮಾಡಿ ಶುಭ ಹಾರೈಸಿದರು.

ಸಮಾರಂಭದಲ್ಲಿ ಮಾಜಿ ಬಿಬಿಎಂಪಿ ಸದಸ್ಯ ಎಂ. ಜಯರಾಮ್, ಟಿ. ನಾರಾಯಣ್, ಎಂ. ರುದ್ರೇಶ್, ಜಿ. ಮರಿಸ್ವಾಮಿ, ಮಾಜಿ ಮಹಾಪೌರ ಗಂಗಾಂಬಿಕೆ ಮಲ್ಲಿಕಾರ್ಜುನ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಕಾರ್ಮಿಕರ ಹಿತ ಕಾಪಾಡಲು ಕೇಂದ್ರ ಸರ್ಕಾರ ಹಲವು ಸುಧಾರಣೆ ಜಾರಿಗೆ ತಂದಿದೆ: ಸಂತೋಷ ಅಕ್ಕಿ

# ಇಪಿಎಫ್ ಹಣ ಸುರಕ್ಷಿತ; ಕಾಂಗ್ರೆಸ್ ಆರೋಪ ಸುಳ್ಳು

**ವಿಜಯಸಾಕ್ಷಿ ಸುದ್ದಿ, ಗದಗ**

ಕೇಂದ್ರ ಸರ್ಕಾರ ನೌಕರರ ಭವಿಷ್ಯ ನಿಧಿ (ಇಪಿಎಫ್) ಹಣವನ್ನು ದುರುಪಯೋಗಪಡಿಸಿಕೊಂಡಿದೆ ಎಂಬ ಕಾಂಗ್ರೆಸ್ ಆರೋಪಗಳು ಸಂಪೂರ್ಣವಾಗಿ ಸುಳ್ಳು ಹಾಗೂ ಹತಾಶ ರಾಜಕಾರಣದ ಭಾಗ ಎಂದು ಬಿಜೆಪಿ ಯುವ ಮೋರ್ಚಾ ಗದಗ ಜಿಲ್ಲಾ ಅಧ್ಯಕ್ಷ ಸಂತೋಷ ಅಕ್ಕಿ ಆರೋಪಿಸಿದ್ದಾರೆ.

ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಉತ್ತರ ಪ್ರದೇಶ ವಿದ್ಯುತ್ ನಿಗಮದ ಭವಿಷ್ಯ ನಿಧಿ ಹೂಡಿಕೆ ಪ್ರಕರಣವನ್ನು ಕೇಂದ್ರ ಸರ್ಕಾರದ ನಿರ್ಧಾರವೆಂದು ಬಿಂಬಿಸುವುದು ತಪ್ಪು. ಸ್ಥಳೀಯ ಮಟ್ಟದಲ್ಲಿ ನಡೆದ ನಿಯಮ ಉಲ್ಲಂಘನೆಯಿಂದ ಆ ಪ್ರಕರಣ ಸಂಭವಿಸಿದ್ದು, ಪ್ರಕರಣ ಬೆಳಕಿಗೆ ಬಂದ ತಕ್ಷಣ ಕೇಂದ್ರ ಸರ್ಕಾರ ತನಿಖೆಗೆ ಆದೇಶಿಸಿ ತಪ್ಪಿತಸ್ಥ ಅಧಿಕಾರಿಗಳು ಹಾಗೂ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಂಡಿದೆ ಎಂದು ಹೇಳಿದ್ದಾರೆ.

ದಿವಾಳಿತನ ಪ್ರಕ್ರಿಯೆಯ ಮೂಲಕ ಆಸ್ತಿಗಳನ್ನು ಮರುಪಡೆಯುವ ಕಾರ್ಯ ನಡೆದಿದ್ದು, ನೌಕರರ ವೈಯಕ್ತಿಕ ಭವಿಷ್ಯ ನಿಧಿ ಖಾತೆಗಳಿಗೆ ಯಾವುದೇ ಹಾನಿಯಾಗದಂತೆ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.



ಇಪಿಎಫ್ ಮೇಲಿನ ಬಡ್ಡಿದರವನ್ನು ಶೇ. 8.25ಕ್ಕೆ ಕಾಯ್ದುಕೊಂಡಿರುವುದು ಮೋದಿ ಸರ್ಕಾರದ ಕಾರ್ಮಿಕ ಪರ ನಿಲುವಿಗೆ ಸಾಕ್ಷಿಯಾಗಿದೆ. 34 ಕೋಟಿಗೂ ಅಧಿಕ ಸದಸ್ಯರ ಖಾತೆಗಳಿಗೆ ಕೇಂದ್ರೀಕೃತ ತಂತ್ರಜ್ಞಾನ ವ್ಯವಸ್ಥೆಯ ಮೂಲಕ ಬಡ್ಡಿ ಜಮೆ ಮಾಡುವ ವ್ಯವಸ್ಥೆ ಜಾರಿಗೊಂಡಿದ್ದು, ಹಣ ವಾಪಸ್ ಪಡೆಯುವ ಪ್ರಕ್ರಿಯೆಯನ್ನೂ ಸರಳಗೊಳಿಸಲಾಗಿದೆ ಎಂದು ಹೇಳಿದರು.

ಭವಿಷ್ಯ ನಿಧಿ ಹಣವನ್ನು ಸುರಕ್ಷಿತ ಸರ್ಕಾರಿ ಬಾಂಡ್‌ಗಳು ಹಾಗೂ ಉನ್ನತ ದರ್ಜೆಯ ಸಂಸ್ಥೆಗಳಲ್ಲಷ್ಟೇ ಹೂಡಿಕೆ ಮಾಡುವ ಕಟ್ಟುನಿಟ್ಟಿನ ಮಾರ್ಗಸೂಚಿಗಳನ್ನು ಜಾರಿಗೊಳಿಸಲಾಗಿದೆ. ವೈದ್ಯಕೀಯ, ಶಿಕ್ಷಣ ಹಾಗೂ ಮದುವೆ ಸೇರಿದಂತೆ ತುರ್ತು ಅಗತ್ಯಗಳಿಗೆ ಸ್ವಯಂಚಾಲಿತ ಹಣ ಬಿಡುಗಡೆ ವ್ಯವಸ್ಥೆಯನ್ನೂ ಜಾರಿಗೆ ತರಲಾಗಿದೆ ಎಂದು ತಿಳಿಸಿದರು.

**ಇಪಿಎಫ್ ಹಣ ಸುರಕ್ಷಿತವಾಗಿದೆ. ಕಾರ್ಮಿಕರ ಹಣಕ್ಕೆ ಮೋದಿ ಸರ್ಕಾರವೇ ಭದ್ರತಾ ಕವಚವಾಗಿದೆ. ಕಾಂಗ್ರೆಸ್ ಸತ್ಯ ಮರೆಮಾಚಿ ಜನರನ್ನು ದಾರಿ ತಪ್ಪಿಸುವ ಪ್ರಯತ್ನ ಮಾಡುತ್ತಿದೆ.**

**- ಸಂತೋಷ ಅಕ್ಕಿ**, ಬಿಜೆಪಿ ಯುವ ಮೋರ್ಚಾ ಗದಗ ಜಿಲ್ಲಾಧ್ಯಕ್ಷ

ರಾಜ್ಯ ಸರ್ಕಾರದ ಆಡಳಿತ ವೈಫಲ್ಯಗಳನ್ನು ಮುಚ್ಚಿಹಾಕುವ ಉದ್ದೇಶದಿಂದ ಕಾಂಗ್ರೆಸ್ ಕೇಂದ್ರ ಸರ್ಕಾರದ ವಿರುದ್ಧ ಆಧಾರರಹಿತ ಆರೋಪಗಳನ್ನು ಮಾಡುತ್ತಿದೆ ಎಂದು ಆರೋಪಿಸಿದ ಅವರು, ಗದಗ ಜಿಲ್ಲೆಯ ಕಾರ್ಮಿಕರು ಹಾಗೂ ಯುವಜನರು ಇಂತಹ ಪ್ರಚಾರವನ್ನು ನಂಬುವುದಿಲ್ಲ ಎಂದು ಹೇಳಿದರು.

### ಬಸ್ ನಿಲ್ದಾಣದಿಂದ ಯುವತಿ ಕಿಡ್ನ್ಯಾಪ್: ಲಾಡ್ಜ್‌ನಲ್ಲಿ ಗ್ಯಾಂಗ್‌ರೇಪ್, 24 ಗಂಟೆಯಲ್ಲೇ ಮೂವರು ಅರೆಸ್ಟ್

**ವಿಜಯಸಾಕ್ಷಿ ಸುದ್ದಿ, ಮೈಸೂರು**

ಖಾಸಗಿ ಬಸ್ ನಿಲ್ದಾಣದ ಬಳಿ ಯುವತಿಯನ್ನು ಅಪಹರಿಸಿ ಲಾಡ್ಜ್‌ಗೆ ಕರೆದೊಯ್ದು ಸಾಮೂಹಿಕ ಅತ್ಯಾಚಾರ ಎಸಗಿದ ಪ್ರಕರಣದಲ್ಲಿ ಟಿ. ನರಸೀಪುರ ಪೊಲೀಸರು ಕ್ಷಿಪ್ರ ಕಾರ್ಯಾಚರಣೆ ನಡೆಸಿ 24 ಗಂಟೆಗಳೊಳಗೆ ಮೂವರು ಆರೋಪಿಗಳನ್ನು ಬಂಧಿಸಿದ್ದಾರೆ. ಪ್ರಕರಣ ಮೈಸೂರು ಜಿಲ್ಲೆಯಲ್ಲಷ್ಟೇ ಅಲ್ಲ, ರಾಜ್ಯಾದ್ಯಂತ ಆತಂಕ ಮೂಡಿಸಿದೆ.

ಪಶ್ಚಿಮ ಬಂಗಾಳ ಮೂಲದ ಯುವತಿಯನ್ನು ಟಿ. ನರಸೀಪುರ ಪಟ್ಟಣದ ಖಾಸಗಿ ಬಸ್ ನಿಲ್ದಾಣದ ಸಮೀಪ ಆರೋಪಿಗಳು ಅಪಹರಿಸಿದ್ದಾರೆ ಎನ್ನಲಾಗಿದೆ. ಬಳಿಕ ಚಾಮರಾಜನಗರ ಜಿಲ್ಲೆಯ ಸಂತೇಮರಹಳ್ಳಿ ಬಳಿಯ ಲಾಡ್ಜ್‌ಗೆ ಕರೆದೊಯ್ದು ಕಿರಣ್, ಕಿಶೋರ್ ಹಾಗೂ ರಿಯಾನ್ ಎಂಬ ಮೂವರು ಆರೋಪಿಗಳು ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ.

ಪ್ರಕರಣದ ಮಾಹಿತಿ ಸಿಕ್ಕ ತಕ್ಷಣ ತನಿಖೆ ಆರಂಭಿಸಿದ ಟಿ. ನರಸೀಪುರ ಪೊಲೀಸರು ತಾಂತ್ರಿಕ ಮಾಹಿತಿ ಹಾಗೂ ಇತರೆ ಸಾಕ್ಷ್ಯಾಧಾರಗಳ ಆಧಾರದ ಮೇಲೆ ಆರೋಪಿಗಳನ್ನು ಪತ್ತೆಹಚ್ಚಿ ಬಂಧಿಸಿದ್ದಾರೆ. ಬಂಧಿತ ಮೂವರನ್ನೂ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

### ಧಾರವಾಡದಲ್ಲಿ ಜಾನಪದ ಉತ್ಸವ ಅದ್ದೂರಿ; ವಿವಿಧ ಜಾನಪದ ಕಲಾವಿದರಿಗೆ ಸನ್ಮಾನ

# ಜಾನಪದ ಕಲೆಗಳ ಉಳಿವಿಗೆ ನಿರಂತರ ಕಾರ್ಯಕ್ರಮ ಅಗತ್ಯ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಆಧುನಿಕ ಸಂಸ್ಕೃತಿ ಹಾಗೂ ಸಾಮಾಜಿಕ ಜಾಲತಾಣಗಳ ಪ್ರಭಾವದಿಂದ ಗ್ರಾಮೀಣ ಜಾನಪದ ಕಲೆಗಳು ನಿಧಾನವಾಗಿ ಕಣ್ಮರೆಯಾಗುತ್ತಿದ್ದು, ಅವುಗಳ ಉಳಿವು ಮತ್ತು ಬೆಳವಣಿಗೆಗಾಗಿ ನಿರಂತರ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸುವ ಅಗತ್ಯವಿದೆ ಎಂದು ಕರ್ನಾಟಕ ಬಯಲುಸೀಮೆ ಪ್ರದೇಶ ಅಭಿವೃದ್ಧಿ ಮಂಡಳಿಯ ಮಾಜಿ ಅಧ್ಯಕ್ಷ ತವನಪ್ಪ ಅಷ್ಟಗಿ ಹೇಳಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಧಾರವಾಡ ಜಿಲ್ಲೆಯ ಮರೆವಾಡ ಗ್ರಾಮದ ಶ್ರೀ ಲಕ್ಷ್ಮೀದೇವಿ ಮಹಿಳಾ ಜಾನಪದ ಕಲಾ ಡೊಳ್ಳಿನ ಸಂಘ ವತಿಯಿಂದ ಕನ್ನಡ ಸಾಹಿತ್ಯ ಭವನದಲ್ಲಿ ಆಯೋಜಿಸಿದ್ದ ಟಿಜಾನಪದ ಉತ್ಸವಟಿ ಕಾರ್ಯಕ್ರಮವನ್ನು ಡೊಳ್ಳು ಬಾರಿಸಿ ಹಾಗೂ ಸಸಿಗೆ ನೀರೆರೆಯುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಕಲಾವಿದರಿಗೆ ಸೂಕ್ತ ವೇದಿಕೆಗಳು ದೊರೆಯಬೇಕು. ಗ್ರಾಮೀಣ ಭಾಗದಲ್ಲಿ ಜಾನಪದ ಕಲೆಗಳ ಕುರಿತು ಹೆಚ್ಚಿನ ಕಾರ್ಯಕ್ರಮಗಳನ್ನು ಆಯೋಜಿಸಲು ತಾವು ಸದಾ ಸಹಕರಿಸುವುದಾಗಿ ತಿಳಿಸಿದರು.



ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ವಿದ್ಯಾವರ್ಧಕ ಸಂಘದ ಕೋಶಾಧ್ಯಕ್ಷ ಸತೀಶ್ ತುರಮರಿ ಮಾತನಾಡಿದರು.

ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ, ಇಲಾಖೆಯ ವಿವಿಧ ಯೋಜನೆಗಳ ಸದುಪಯೋಗವನ್ನು ಕಲಾವಿದರು ಪಡೆದುಕೊಳ್ಳಬೇಕು. ಗ್ರಾಮೀಣ ಭಾಗದಲ್ಲಿ ಆಯೋಜಿಸುವ ಸಾಂಸ್ಕೃತಿಕ ಕಾರ್ಯಕ್ರಮಗಳಿಗೆ ಇಲಾಖೆಯಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುದ್ದಪ್ಪ ಜಂಗಳಿ, ಬಸಪ್ಪ ಮಾದರ, ಪರಶುರಾಮ ಮಾದರ, ಮಲ್ಲಪ್ಪ ಲಕ್ಕಣ್ಣವರ, ಶಂಕರಪ್ಪ, ಮಹಾದೇವಪ್ಪ ಗರಗದ, ಶ್ರೀಕಾಂತ ಬಬಲ್, ದ್ಯಾಮಣ್ಣ ಲಮಾಣಿ, ಶಿವಾನಂದ ಅಮರಶೆಟ್ಟಿ, ಭೀಮಸಿ ಕಬ್ಬೂರಕರ, ಲಕ್ಷ್ಮಪ್ಪ ಕಂಬಳನ್ನವರ, ಧರ್ಮರಾಜ ಕಂಬಳೇನವರ್, ಹನುಮಂತಪ್ಪ ಮಾದರ ಸೇರಿದಂತೆ ಹಲವು ಜಾನಪದ ಕಲಾವಿದರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮಕ್ಕೆ ಮರೆವಾಡ ಗ್ರಾಮದ ಶೇಖರಯ್ಯ ಹಿರೇಮಠ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಗ್ರಾಮ ಪಂಚಾಯಿತಿ ಪಿಡಿಒ ಮಲ್ಲಿಕಾರ್ಜುನ ಕೊಯಪ್ಪನವರ, ಮಾಜಿ ಅಧ್ಯಕ್ಷ ಚನ್ನಬಸಪ್ಪ ಮೊರಬದ, ಬಸವರಾಜ ಮಾದರ, ಪರಮೇಶ್ವರ ಮಾದರ, ಸುನಿತಾ ಹಡಪದ, ಆನಂದ ದ್ಯಾ ಮಾದರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಮಹಾದೇವಿ ದುರ್ಗವ್ವ ಮಾದರ ಕಾರ್ಯಕ್ರಮ ನಿರೂಪಿಸಿದರು. ಬಸವ ಮಾದರ ಸ್ವಾಗತಿಸಿದರು. ಶೋಭಾ ಕಂಬಳನ್ನವರ ವಂದಿಸಿದರು.

## ಸಂಕ್ಷಿಪ್ತ ಸುದ್ದಿಗಳು

# ಧಾರವಾಡ ಜಿಲ್ಲೆಯಲ್ಲಿ ಶೇ.98.67 ಗಣತಿ ನಮೂನೆ ವಿತರಣೆ ಪೂರ್ಣ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ2026ರ ಅಂಗವಾಗಿ ಧಾರವಾಡ ಜಿಲ್ಲೆಯಲ್ಲಿ ಜುಲೈ 21ರ ವೇಳೆಗೆ ಶೇ.98.67ರಷ್ಟು ಗಣತಿ ನಮೂನೆಗಳ (ಲ್ಘುಇಟ್ಟಿಚಿಠಿಜಿಟ್ಟ್ಲ ಊಟ್ಟಇಠ) ವಿತರಣೆ ಪೂರ್ಣಗೊಂಡಿದೆ ಎಂದು ಜಿಲ್ಲಾಡಳಿತ ತಿಳಿಸಿದೆ.

ಜಿಲ್ಲೆಯ 16,21,961 ಮತದಾರರಲ್ಲಿ 16,00,407 ಮಂದಿಗೆ ಗಣತಿ ನಮೂನೆಗಳನ್ನು ವಿತರಿಸಲಾಗಿದ್ದು, 10,16,272 ನಮೂನೆಗಳು ಗಣಕೀಕರಣಗೊಂಡಿದ್ದು, ಇದು ಶೇ.62.66ರಷ್ಟಾಗಿದೆ.

ಈವರೆಗೆ 1,34,971 ಪ್ರಕರಣಗಳನ್ನು ಗೈರು, ಸ್ಥಳಾಂತರ, ಮರಣ ಹಾಗೂ ದ್ವಿಪ್ರತಿ ಎಂದು ಗುರುತಿಸಲಾಗಿದೆ. ಇದರಲ್ಲಿ 62,657 ಶಾಶ್ವತ ವಲಸೆ, 29,453 ಮರಣ, 8,950 ದ್ವಿಪ್ರತಿ, 33,350 ಗೈರು ಹಾಗೂ 561 ಇತರೆ ಪ್ರಕರಣಗಳು ಸೇರಿವೆ.

ನವಲಗುಂದ, ಕುಂದಗೋಳ, ಧಾರವಾಡ, ಹುಬ್ಬಳ್ಳಿಧಾರವಾಡ ಪೂರ್ವ ಹಾಗೂ ಕಲಘಟಗಿ ವಿಧಾನಸಭಾ ಕ್ಷೇತ್ರಗಳಲ್ಲಿ ಶೇ.100ರಷ್ಟು ಗಣತಿ ನಮೂನೆಗಳ ವಿತರಣೆ ಪೂರ್ಣಗೊಂಡಿದೆ.

ಮತಗಟ್ಟೆ ಮಟ್ಟದ ಅಧಿಕಾರಿಗಳು (ಬಿಎಲ್ಒ) ಮನೆ-ಮನೆಗೆ ಭೇಟಿ ನೀಡಿದಾಗ ಸಾರ್ವಜನಿಕರು ಭರ್ತಿ ಮಾಡಿದ ಗಣತಿ ನಮೂನೆಗಳನ್ನು ಅವರಿಗೆ ಸಲ್ಲಿಸಿ ಸಹಕರಿಸುವಂತೆ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಮನವಿ ಮಾಡಿದ್ದಾರೆ.

# ಯುಪಿಎಸ್‌ಸಿ ಪೂರ್ವ ತರಬೇತಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2026-27ನೇ ಸಾಲಿನ ಯುಪಿಎಸ್‌ಸಿ ನಾಗರಿಕ ಸೇವಾ ಪರೀಕ್ಷೆಯ ಪೂರ್ವ ತರಬೇತಿಗೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಪ್ರವರ್ಗ 1, 2(ಎ), 3(ಎ) ಹಾಗೂ 3(ಬಿ)ಗೆ ಸೇರಿದ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ವಸತಿ ಸೌಲಭ್ಯದೊಂದಿಗೆ ತರಬೇತಿ ನೀಡಲಾಗುತ್ತದೆ.

ಅರ್ಹ ಅಭ್ಯರ್ಥಿಗಳು ಆಗಸ್ಟ್ 3ರೊಳಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಇಲಾಖೆಯ ವೆಬ್‌ಸೈಟ್ ಅಥವಾ 8050770004 ಸಹಾಯವಾಣಿ ಸಂಖ್ಯೆಯನ್ನು ಸಂಪರ್ಕಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ರೀಡಾಪಟುಗಳಿಗೆ ವಿವಿಧ ಪ್ರಶಸ್ತಿ, ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಅರ್ಹ ಕ್ರೀಡಾಪಟುಗಳು ಹಾಗೂ ಸಾಧಕರಿಗೆ ವಿವಿಧ ರಾಜ್ಯಮಟ್ಟದ ಪ್ರಶಸ್ತಿ ಮತ್ತು ಪ್ರೋತ್ಸಾಹಧನ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಏಕಲವ್ಯ ಪ್ರಶಸ್ತಿ2025, ಜೀವಮಾನ ಸಾಧನೆ ಪ್ರಶಸ್ತಿ2025, ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ2025, ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ2025, ಗುರಿಒಲಿಂಪಿಕ್ ಪದಕ2026-27, ನಗದು ಪುರಸ್ಕಾರ2025, ಶೈಕ್ಷಣಿಕ ಶುಲ್ಕ ಮರುಪಾವತಿ2026-27 ಹಾಗೂ ಕ್ರೀಡಾ ವಿದ್ಯಾರ್ಥಿ ವೇತನ2025-26 ಸೌಲಭ್ಯಗಳಿಗೆ ಅರ್ಹರು ಅರ್ಜಿ ಸಲ್ಲಿಸಬಹುದು.

ಅರ್ಹ ಕ್ರೀಡಾಪಟುಗಳು ಇಲಾಖೆಯ ಅಧಿಕೃತ ವೆಬ್‌ಸೈಟ್ ಮೂಲಕ ಜುಲೈ 31ರೊಳಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ 0836-2447424 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### ಹೊಸ ಪಿಎಫ್ ಯೋಜನೆಯಿಂದ ನಿವೃತ್ತಿ ಬದುಕಿಗೆ ಹೊಡೆತ | ಕಾರ್ಪೊರೇಟ್ ಪರ ನೀತಿಯಿಂದ ಕಾರ್ಮಿಕರ ಭವಿಷ್ಯಕ್ಕೆ ಧಕ್ಕೆ: ಕೃಷ್ಣಗೌಡ ಎಚ್. ಪಾಟೀಲ ಆರೋಪ

# ಕಾರ್ಮಿಕರ ಪಿಎಫ್‌ಗೂ ಮೋದಿ ಸರ್ಕಾರ ಕತ್ತರಿ

**ವಿಜಯಸಾಕ್ಷಿ ಸುದ್ದಿ, ಗದಗ**

ಕೇಂದ್ರದ ಮೋದಿ ಸರ್ಕಾರ ಜಾರಿಗೆ ತರಲು ಮುಂದಾಗಿರುವ ಟಿಹೊಸ ಭವಿಷ್ಯ ನಿಧಿ (ಪಿಎಫ್) ಯೋಜನೆ2026ಟಿ ಕಾರ್ಮಿಕರ ಹಿತಾಸಕ್ತಿಗೆ ವಿರುದ್ಧವಾಗಿದ್ದು, ಕಾರ್ಪೊರೇಟ್ ಕಂಪನಿಗಳಿಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಕಾರ್ಮಿಕರ ನಿವೃತ್ತಿ ಭದ್ರತೆಗೆ ಕತ್ತರಿ ಹಾಕಲಾಗುತ್ತಿದೆ ಎಂದು ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಎಚ್. ಪಾಟೀಲ ಆರೋಪಿಸಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಕಾರ್ಮಿಕರ ಕಡ್ಡಾಯ ಪಿಎಫ್ ಕೊಡುಗೆಯನ್ನು ₹1,800ಕ್ಕೆ ಸೀಮಿತಗೊಳಿಸುವ ಮೂಲಕ ಸುಮಾರು 8 ಕೋಟಿ ಕಾರ್ಮಿಕರ ನಿವೃತ್ತಿ ನಿಧಿಗೆ ಶೇ.50ಕ್ಕೂ ಹೆಚ್ಚು ಹೊಡೆತ ಬೀಳಲಿದೆ ಎಂದು ಆರೋಪಿಸಿದ್ದಾರೆ.

2014ರಿಂದ ಕನಿಷ್ಠ ವೇತನ ಮಿತಿಯನ್ನು ₹15 ಸಾವಿರದಲ್ಲೇ ಉಳಿಸಿಕೊಂಡಿರುವ ಕೇಂದ್ರ ಸರ್ಕಾರ, ಹಣದುಬ್ಬರ ಹೆಚ್ಚಾಗಿದ್ದರೂ ಅದನ್ನು ₹21 ಸಾವಿರಕ್ಕೆ ಏರಿಸಿಲ್ಲ. ಹೆಚ್ಚುವರಿ ಪಿಎಫ್ ಉಳಿತಾಯದ ಮೇಲಿನ ತೆರಿಗೆ ವಿನಾಯಿತಿಯನ್ನೂ ಕಡಿತಗೊಳಿಸಿ ಕಾರ್ಮಿಕರ ಮೇಲೆ ಹೆಚ್ಚುವರಿ ಹೊರೆ ಹಾಕಲಾಗಿದೆ ಎಂದು ಟೀಕಿಸಿದ್ದಾರೆ.

ಕೇಂದ್ರ ಸರ್ಕಾರ ಕಾರ್ಪೊರೇಟ್ ಸಂಸ್ಥೆಗಳ ತೆರಿಗೆಯನ್ನು ಕಡಿಮೆ ಮಾಡಿ, ಲಕ್ಷಾಂತರ ಕೋಟಿ ರೂಪಾಯಿ ಸಾಲ ಮನ್ನಾ ಮಾಡಿದೆ. ಆದರೆ ದೇಶದ ಬೆನ್ನೆಲುಬಾಗಿರುವ ಕಾರ್ಮಿಕರ ಭವಿಷ್ಯ ನಿಧಿಯನ್ನೇ ಕಡಿತಗೊಳಿಸುತ್ತಿದೆ. ಕೈಗೆ ಹೆಚ್ಚು ಸಂಬಳ ಸಿಗುತ್ತದೆ ಎಂಬುದು ಕೇವಲ ಜನರನ್ನು ದಾರಿ ತಪ್ಪಿಸುವ ಪ್ರಯತ್ನ ಎಂದು ಆರೋಪಿಸಿದ್ದಾರೆ.



ದೀರ್ಘಾವಧಿಯಲ್ಲಿ ಪಿಎಫ್ ಕೊಡುಗೆ ಕಡಿಮೆಯಾಗುವುದರಿಂದ ನಿವೃತ್ತಿ ನಂತರ ಕಾರ್ಮಿಕರಿಗೆ ದೊಡ್ಡ ಪ್ರಮಾಣದ ಆರ್ಥಿಕ ನಷ್ಟವಾಗಲಿದೆ.

ಶೇ.8.25ರಷ್ಟು ಸುರಕ್ಷಿತ ಬಡ್ಡಿಯ ಲಾಭವೂ ಕಡಿಮೆಯಾಗಲಿದ್ದು, ಒಬ್ಬ ಉದ್ಯೋಗಿಗೆ ₹15ರಿಂದ ₹20 ಲಕ್ಷದವರೆಗೆ ನಷ್ಟವಾಗುವ ಸಾಧ್ಯತೆ ಇದೆ ಎಂದು ಹೇಳಿದ್ದಾರೆ.

> **ಕೈಗೆ ಹೆಚ್ಚು ಸಂಬಳ ಸಿಗುತ್ತದೆ ಎಂಬುದು ಬಿಜೆಪಿ ಸರ್ಕಾರದ ಕಣ್ಣೊರೆಸುವ ತಂತ್ರ. ವಾಸ್ತವದಲ್ಲಿ ಕಾರ್ಮಿಕರ ಭವಿಷ್ಯ ನಿಧಿಯನ್ನೇ ಕಡಿತಗೊಳಿಸಿ ಕಾರ್ಪೊರೇಟ್ ಸಂಸ್ಥೆಗಳಿಗೆ ಲಾಭ ಮಾಡಿಕೊಡಲಾಗುತ್ತಿದೆ.**
> - **ಕೃಷ್ಣಗೌಡ ಎಚ್. ಪಾಟೀಲ**, ಅಧ್ಯಕ್ಷರು, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ

ಇನ್ನೂ 30.91 ಲಕ್ಷ ಕಾರ್ಮಿಕರ ₹9,330 ಕೋಟಿ ಪಿಎಫ್ ಹಣವನ್ನು ಸರ್ಕಾರ ಬಿಡುಗಡೆ ಮಾಡಿಲ್ಲ ಎಂದು ಆರೋಪಿಸಿರುವ ಅವರು, ಬಡ ಕಾರ್ಮಿಕರ ದುಡಿಮೆಯ ಹಣವನ್ನು ತಡೆಹಿಡಿಯುವ ಮೂಲಕ ಸರ್ಕಾರ ಅನ್ಯಾಯ ಮಾಡುತ್ತಿದೆ ಎಂದು ದೂರಿದ್ದಾರೆ.

ಮುಂಬೈ ಇಪಿಎಫ್‌ಒದಲ್ಲಿ ₹18.97 ಕೋಟಿ, ಬೆಂಗಳೂರಿನ ಇಪಿಎಫ್‌ಒ ಸಿಬ್ಬಂದಿ ಸಹಕಾರ ಸಂಘದಲ್ಲಿ ₹70 ಕೋಟಿ ಹಾಗೂ ಉತ್ತರ ಪ್ರದೇಶದ ಯುಪಿಪಿಸಿಎಲ್ ಹಗರಣ ಸೇರಿದಂತೆ ಹಲವು ಪ್ರಕರಣಗಳನ್ನು ಉಲ್ಲೇಖಿಸಿದ ಅವರು, ಕಾರ್ಮಿಕರ ಉಳಿತಾಯದ ಹಣದ ಭದ್ರತೆಯಲ್ಲಿ ಕೇಂದ್ರ ಸರ್ಕಾರ ಸಂಪೂರ್ಣ ವಿಫಲವಾಗಿದೆ ಎಂದು ಆರೋಪಿಸಿದ್ದಾರೆ.

ಡಿಜಿಟಲ್ ವ್ಯವಸ್ಥೆಯ ಹೆಸರಿನಲ್ಲಿ ಕಾರ್ಮಿಕರ ಹಣದ ಮೇಲೆ ನಿಯಂತ್ರಣ ಸಾಧಿಸಲು ಸರ್ಕಾರ ಮುಂದಾಗಿದ್ದು, ಭ್ರಷ್ಟಾಚಾರ ತಡೆಯುವ ಕನಿಷ್ಠ ಸುರಕ್ಷತಾ ಕ್ರಮಗಳನ್ನೂ ಕೈಗೊಂಡಿಲ್ಲ. ಇಂತಹ ಧೋರಣೆಯಿಂದ ಕಾರ್ಮಿಕರ ಭವಿಷ್ಯಕ್ಕೆ ದೊಡ್ಡ ಅಪಾಯ ಎದುರಾಗಿದೆ ಎಂದು ಕೃಷ್ಣಗೌಡ ಎಚ್. ಪಾಟೀಲ ಪ್ರಕಟಣೆಯಲ್ಲಿ ಆರೋಪಿಸಿದ್ದಾರೆ.

### ಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಮಾಲಿಕೆಯಲ್ಲಿ ಭಾರತೀಯ ಮೌಲ್ಯಗಳ ಅಳವಡಿಕೆಗೆ ಕರೆ

# ನಿಸ್ವಾರ್ಥ ಸೇವೆ, ಸಂಸ್ಕಾರಗಳಿಂದ ಸದೃಢ ಸಮಾಜ ನಿರ್ಮಾಣ



**ವಿಜಯಸಾಕ್ಷಿ ಸುದ್ದಿ, ಗದಗ**

ಇಂದಿನ ಸಮಾಜದಲ್ಲಿ ಹೆಚ್ಚುತ್ತಿರುವ ಮಾನಸಿಕ ಒತ್ತಡ, ಆತಂಕ ಹಾಗೂ ಮೌಲ್ಯಗಳ ಕುಸಿತವನ್ನು ನಿವಾರಿಸಬೇಕಾದರೆ ನಿಸ್ವಾರ್ಥ ಕರ್ಮ, ನಾಮಸ್ಮರಣೆ, ಧ್ಯಾನ ಮತ್ತು ಭಾರತೀಯ ಸಂಸ್ಕಾರಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ವ್ಯಕ್ತಿಯ ಆಂತರಿಕ ಶಾಂತಿಯೇ ಸದೃಢ ಸಮಾಜ ನಿರ್ಮಾಣದ ಅಡಿಪಾಯ ಎಂದು ಕಾಶಿ ಜಂಗಮವಾಡಿ ಮಠದ ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ನಗರದ ಮಾಂಗಲ್ಯ ಮಂದಿರದಲ್ಲಿ ಗದಗಬೆಟಗೇರಿ ಪಂಚಾಚಾರ್ಯ ಸೇವಾ ಸಂಘದ ವತಿಯಿಂದ ಆಯೋಜಿಸಿದ್ದ ಟಿಶ್ರೀ ಸಿದ್ಧಾಂತ ಶಿಖಾಮಣಿ ಆಧ್ಯಾತ್ಮಿಕ ಪ್ರವಚನ ಮಾಲಿಕೆಟಿ ಹಾಗೂ ಇಷ್ಟಲಿಂಗ ಮಹಾಪೂಜೆ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು, ಧರ್ಮವೆಂದರೆ ಕೇವಲ ಆಚರಣೆ ಅಲ್ಲ; ಅದು ಮಾನವೀಯತೆ, ನಿಸ್ವಾರ್ಥ ಸೇವೆ ಹಾಗೂ ಆತ್ಮೋನ್ನತಿಯ ಮಾರ್ಗವಾಗಿದೆ ಎಂದು ತಿಳಿಸಿದರು.

ಫಲಾಪೇಕ್ಷೆಯಿಲ್ಲದೆ ಕರ್ತವ್ಯ ನಿರ್ವಹಿಸಿದಾಗ ಬದುಕು ಸಾರ್ಥಕವಾಗುತ್ತದೆ. ದೇವರ ನಾಮಸ್ಮರಣೆಯು ಮನಸ್ಸಿಗೆ ಶಾಂತಿ, ಆತ್ಮವಿಶ್ವಾಸ ಹಾಗೂ ಧೈರ್ಯ ನೀಡುತ್ತದೆ. ಜೀವನದಲ್ಲಿ ಎದುರಾಗುವ ವೈಫಲ್ಯಗಳನ್ನು ಆತ್ಮಬಲದಿಂದ ಎದುರಿಸಬೇಕು ಎಂದು ಹೇಳಿದರು.

ಇಂದಿನ ಯುವಜನರು ಹಾಗೂ ಮಕ್ಕಳಲ್ಲಿ ಮಾನಸಿಕ ಒತ್ತಡ, ಖಿನ್ನತೆ ಮತ್ತು ಏಕಾಗ್ರತೆಯ ಕೊರತೆ ಹೆಚ್ಚುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಪೋಷಕರು ಮಕ್ಕಳಲ್ಲಿ ಧ್ಯಾನ, ಪ್ರಾರ್ಥನೆ ಮತ್ತು ನಾಮಸ್ಮರಣೆಯ ಅಭ್ಯಾಸ ಬೆಳೆಸಬೇಕು. ಆಧುನಿಕ ಶಿಕ್ಷಣದ ಜೊತೆಗೆ ಭಾರತೀಯ ಸಂಸ್ಕೃತಿ ಹಾಗೂ ನೈತಿಕ ಮೌಲ್ಯಗಳನ್ನು ಕಲಿಸಿದಾಗ ಮಾತ್ರ ಉತ್ತಮ ವ್ಯಕ್ತಿತ್ವ ರೂಪುಗೊಳ್ಳುತ್ತದೆ ಎಂದು ಅಭಿಪ್ರಾಯಪಟ್ಟರು.

> **ನಿಸ್ವಾರ್ಥ ಕರ್ಮ, ನಾಮಸ್ಮರಣೆ, ಧ್ಯಾನ ಹಾಗೂ ಭಾರತೀಯ ಸಂಸ್ಕಾರಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ವ್ಯಕ್ತಿಯೂ, ಸಮಾಜವೂ ಸದೃಢವಾಗುತ್ತದೆ.**
> - **ಜಗದ್ಗುರು ಡಾ. ಮಲ್ಲಿಕಾರ್ಜುನ ವಿಶ್ವಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು**

ಧ್ಯಾನ ಮತ್ತು ಆಧ್ಯಾತ್ಮಿಕ ಸಾಧನೆ ಮನೋಬಲ ಹೆಚ್ಚಿಸಲು ಸಹಕಾರಿಯಾಗಿದ್ದರೂ, ಮಾನಸಿಕ ಆರೋಗ್ಯ ಸಮಸ್ಯೆಗಳಿದ್ದರೆ ವೈದ್ಯರ ಸಲಹೆ ಮತ್ತು ಚಿಕಿತ್ಸೆಯನ್ನು ನಿರ್ಲಕ್ಷಿಸಬಾರದು ಎಂಬ ಸಮತೋಲಿತ ಸಂದೇಶವನ್ನೂ ಅವರು ನೀಡಿದರು.

ಪಂಚಪೀಠ ಪರಂಪರೆಯ ಇಷ್ಟಲಿಂಗ ಮಹಾಪೂಜೆಯ ವೈಭವವನ್ನು ಮುಂದಿನ ಪೀಳಿಗೆಗೆ ತಲುಪಿಸುವುದು ಸಮಾಜದ ಜವಾಬ್ದಾರಿಯಾಗಿದೆ. ವಿಶೇಷವಾಗಿ ಮಹಿಳೆಯರು ಭಜನೆ, ಆರತಿ ಹಾಗೂ ಮಹಾಪೂಜೆಯ ಗಾಯನದಲ್ಲಿ ಸಕ್ರಿಯವಾಗಿ ಪಾಲ್ಗೊಂಡು ಧಾರ್ಮಿಕ ಪರಂಪರೆಯನ್ನು ಉಳಿಸಬೇಕು. ಮುಂದಿನ ವರ್ಷದೊಳಗೆ ಗದಗದ ಮಹಿಳಾ ಮಂಡಳಿಯವರು ಇಷ್ಟಲಿಂಗ ಮಹಾಪೂಜೆಯ ಗಾಯನವನ್ನು ಕರಗತ ಮಾಡಿಕೊಳ್ಳಬೇಕು ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ನರೇಗಲ್ ಹಿರೇಮಠದ ಪೂಜ್ಯ ಮಲ್ಲಿಕಾರ್ಜುನ ಶಿವಾಚಾರ್ಯ ಸ್ವಾಮೀಜಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಸಂಗಮ್ಮ ಹಿರೇಮಠ, ಮಲ್ಲಿಕಾರ್ಜುನ ಸಂತೋಜಿ, ವೀರಣ್ಣ ಕರಿಬಿಷ್ಠಿ, ನಾಗನಗೌಡ ನಾಗಲಾಪೂರ, ಕಾಂಚನಾಮಾಲಾ ಬಾಳಿಹಳ್ಳಿಮಠ, ಮಾಲಕ್ಕ ಮಸಗಿ, ಸಿ.ಜಿ. ಅಬ್ಬಿಗೇರಿಮಠ, ಬಸವರಾಜ ಕೂಗು, ಮಲ್ಲಿಕಾರ್ಜುನ ಐಲಿ, ಕುಬೇರಗೌಡ ಪರ್ವತಗೌಡರ, ಉಮೇಶ ಭೂಸ್ತ, ಬಸವಣ್ಣೆಪ್ಪ ಪುರದ, ಡಾ. ಎಸ್. ಎಫ್. ವರವಿ, ಸುರೇಶ ಶೆಟ್ಟರ, ಮಲ್ಲಣ್ಣ ಸಿಕ್ಕೇದೇಸಾಯಿ, ಫಕ್ಕೀರಯ್ಯ ಶಾಸ್ತ್ರಿ ಹಿರೇಮಠ, ಸಂತೋಷ ತೋಟಗಂಟಿಮಠ, ಪ್ರಭು ದಂಡಾವತಿಮಠ ಹಾಗೂ ಶಿವನಗುತ್ತಿ ದಂಪತಿಗಳನ್ನು ಸನ್ಮಾನಿಸಲಾಯಿತು.

ಸಿದ್ಧಲಿಂಗಪ್ಪ ಚಳಗೇರಿ ಸ್ವಾಗತಿಸಿದರು. ಅನೀಲ ಅಬ್ಬಿಗೇರಿ ಕಾರ್ಯಕ್ರಮ ನಿರೂಪಿಸಿದರು. ಗುರುಸಿದ್ಧಯ್ಯ ಹಿರೇಮಠ ವಂದಿಸಿದರು.

ಕಾರ್ಯಕ್ರಮದಲ್ಲಿ ಗಣ್ಯರು, ಭಕ್ತರು ಹಾಗೂ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

# ಸ್ವರಸಾಮ್ರಾಟ ಪಂ. ಬಸವರಾಜ ರಾಜಗುರುಗೆ ಸಂಗೀತ ನಮನ



**ವಿಜಯಸಾಕ್ಷಿ ಸುದ್ದಿ, ಧಾರವಾಡ**

ಪದ್ಮಭೂಷಣ ಪುರಸ್ಕೃತ, ಸ್ವರಸಾಮ್ರಾಟ ಪಂಡಿತ ಬಸವರಾಜ ರಾಜಗುರು ಅವರ 35ನೇ ಪುಣ್ಯಸ್ಮರಣೆ ಅಂಗವಾಗಿ ಧಾರವಾಡದ ಹೊಸಯಲ್ಲಾಪುರದಲ್ಲಿರುವ ಅವರ ಸಮಾಧಿ ಸ್ಥಳದಲ್ಲಿ ಮಂಗಳವಾರ ಟಿಪುಣ್ಯಸ್ಮರಣೆ ಹಾಗೂ ಸಂಗೀತ ನಮನಟಿ ಕಾರ್ಯಕ್ರಮವನ್ನು ಭಕ್ತಿಭಾವದಿಂದ ಆಚರಿಸಲಾಯಿತು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅಧೀನದ ಸ್ವರಸಾಮ್ರಾಟ ಪಂ. ಬಸವರಾಜ ರಾಜಗುರು ರಾಷ್ಟ್ರೀಯ ಸ್ಮಾರಕ (ರಿ) ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಹೊಸಯಲ್ಲಾಪುರ ಹಿರೇಮಠದ ಪೂಜ್ಯ ಶಶಾಂಕ ಸ್ವಾಮೀಜಿ ಅವರು ಪಂ. ಬಸವರಾಜ ರಾಜಗುರು ಅವರ ಮೂರ್ತಿಗೆ ಪೂಜೆ ನೆರವೇರಿಸಿ, ಪುಷ್ಪಾರ್ಚನೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಸ್ಮಾರಕ ಟ್ರಸ್ಟ್ ಅಧ್ಯಕ್ಷ ಡಾ. ಮಲ್ಲಿಕಾರ್ಜುನ ಮನಸೂರ, ಟ್ರಸ್ಟ್ ಅಧ್ಯಕ್ಷ ಪಂ. ಎಂ. ವೆಂಕಟೇಶಕುಮಾರ, ಪಂ. ಕೈವಲ್ಯಕುಮಾರ ಗುರವ, ಭಾರತಿದೇವಿ ರಾಜಗುರು, ಹಿರಿಯ ಸಂಗೀತಗಾರ ಡಾ. ಮುದ್ದುಮೋಹನ, ಟ್ರಸ್ಟ್ ಸದಸ್ಯರಾದ ನಿಜಗುಣ ರಾಜಗುರು, ಪಂ. ಸಾತಲಿಂಗಪ್ಪ ದೇಸಾಯಿ (ಕಲ್ಲೂರ), ಛೋಟೆ ರಹಿಮತ ಖಾನ್, ಅಲ್ಲಮಪ್ರಭು ಕಡಕೋಳ, ಡಾ. ಅನೀಲ ಮೇತ್ರಿ, ಸುಪ್ರಿಯಾ ಭಟ್, ಹಿರಿಯ ಶಿಷ್ಯರಾದ ವಿದುಷಿ ಪೂರ್ಣಿಮಾ ಭಟ್ ಹಾಗೂ ಡಾ. ಶಾಂತರಾಂ ಹೆಗಡೆ ಸೇರಿದಂತೆ ಅನೇಕ ಗಣ್ಯರು ಪಾಲ್ಗೊಂಡು ರಾಜಗುರು ಅವರಿಗೆ ನಮನ ಸಲ್ಲಿಸಿದರು.

ಕುಮಾರ ಬೆಕ್ಕೇರಿ ಸ್ವಾಗತಿಸಿದರು. ಆರತಿ ದೇವಶಿಖಾಮಣಿ ಕಾರ್ಯಕ್ರಮ ನಿರೂಪಿಸಿದರು. ಕಾರ್ಯಕ್ರಮದ ಅಂಗವಾಗಿ ಅನುರಾಗ ಸಾಂಸ್ಕೃತಿಕ ಕಲಾಬಳಗ, ಧಾರವಾಡ ವತಿಯಿಂದ ಸಂಗೀತ ನಮನ ಕಾರ್ಯಕ್ರಮ ನಡೆಯಿತು.

# ಕರವೇ ಘಟಕಕ್ಕೆ ನೂತನ ಪದಾಧಿಕಾರಿಗಳ ಆಯ್ಕೆ





**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ಗದಗ ಜಿಲ್ಲಾ ಘಟಕದ ಕಾರ್ಯಾಲಯದಲ್ಲಿ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್. ಅಬ್ಬಿಗೇರಿ ಅವರ ಅಧ್ಯಕ್ಷತೆಯಲ್ಲಿ ನಡೆದ ಗದಗ ತಾಲೂಕು ಪದಾಧಿಕಾರಿಗಳ ಸಭೆಯಲ್ಲಿ ಕರವೇ ಗದಗ ನಗರ ಘಟಕದ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಸಭೆಯಲ್ಲಿ ದಾವಲಸಾಬ ತಹಶೀಲ್ದಾರ ಅವರನ್ನು ಗದಗ ನಗರ ಘಟಕದ ಅಧ್ಯಕ್ಷರನ್ನಾಗಿ ಹಾಗೂ ರವಿ ಮಲ್ಲಾಡ ಅವರನ್ನು ನಗರ ಘಟಕದ ಪ್ರಧಾನ ಕಾರ್ಯದರ್ಶಿಯಾಗಿ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್. ಅಬ್ಬಿಗೇರಿ, ನಾಡು, ನುಡಿ, ನೆಲ ಮತ್ತು ಜಲದ ರಕ್ಷಣೆಯ ಹೋರಾಟದಲ್ಲಿ ಹಲವು ವರ್ಷಗಳಿಂದ ಸಾಮಾನ್ಯ ಕಾರ್ಯಕರ್ತರಾಗಿ ಸೇವೆ ಸಲ್ಲಿಸಿರುವ ಇವರಿಬ್ಬರಿಗೆ ಮಹತ್ವದ ಜವಾಬ್ದಾರಿ ನೀಡಲಾಗಿದೆ. ಸಾರ್ವಜನಿಕರ ಸಮಸ್ಯೆಗಳ ಕುರಿತು ರಾಜಿರಹಿತ ಹಾಗೂ ನ್ಯಾಯಯುತ ಹೋರಾಟ ನಡೆಸುವ ಮೂಲಕ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವಂತೆ ಸಲಹೆ ನೀಡಿದರು.

ನೂತನ ಪದಾಧಿಕಾರಿಗಳ ಆಯ್ಕೆಗೆ ಸಭೆಯಲ್ಲಿ ಹಾಜರಿದ್ದ ಪದಾಧಿಕಾರಿಗಳು ಅಭಿನಂದನೆ ಸಲ್ಲಿಸಿ, ಸಂಘಟನೆ ಇನ್ನಷ್ಟು ಸದೃಢವಾಗಲಿ ಎಂದು ಶುಭ ಹಾರೈಸಿದರು.

### ಪ್ರತ್ಯೇಕ ರಸ್ತೆ ವ್ಯವಸ್ಥೆಗೆ ಆಗ್ರಹ; ಕ್ರಮ ಕೈಗೊಳ್ಳದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ

# ಭಾರಿ ಗಾತ್ರದ ವಿಂಡ್‌ಮಿಲ್ ವಾಹನಗಳಿಗೆ ಕರವೇ ತಡೆ




**ವಿಜಯಸಾಕ್ಷಿ ಸುದ್ದಿ, ಗದಗ**

ಗದಗಮುಳಗುಂದಲಕ್ಷ್ಮೇಶ್ವರ ರಸ್ತೆಯಲ್ಲಿ ಸಂಚರಿಸುತ್ತಿರುವ ಭಾರಿ ಗಾತ್ರದ ವಿಂಡ್ ಮಿಲ್ (ವಿಂಡ್ ಪರ್ವ) ಉಪಕರಣ ಸಾಗಣೆ ವಾಹನಗಳಿಂದ ಸಾರ್ವಜನಿಕರಿಗೆ ತೀವ್ರ ತೊಂದರೆಯಾಗುತ್ತಿದೆ ಎಂದು ಆರೋಪಿಸಿ ಕರ್ನಾಟಕ ರಕ್ಷಣಾ ವೇದಿಕೆ (ಕರವೇ) ಗದಗ ಜಿಲ್ಲಾ ಘಟಕದ ಕಾರ್ಯಕರ್ತರು ಮಂಗಳವಾರ ನಗರದ ಅಂಜುಮನ್ ಕಾಲೇಜು ಎದುರು ಪ್ರತಿಭಟನೆ ನಡೆಸಿದರು.

ಪ್ರತಿಭಟನೆ ವೇಳೆ ಭಾರಿ ಗಾತ್ರದ ವಾಹನಗಳನ್ನು ತಡೆದು ಆಕ್ರೋಶ ವ್ಯಕ್ತಪಡಿಸಿದ ಕಾರ್ಯಕರ್ತರು, ಈ ಕುರಿತು ಹಲವು ಬಾರಿ ಪ್ರಾದೇಶಿಕ ಸಾರಿಗೆ ಇಲಾಖೆ ಹಾಗೂ ಜಿಲ್ಲಾ ಪೊಲೀಸ್ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಕರವೇ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್. ಅಬ್ಬಿಗೇರಿ, ಸೆರೆಂಟಿಕಾ ಕಂಪನಿಯ ವಿಂಡ್ ಮಿಲ್ ಉಪಕರಣ ಸಾಗಣೆ ವಾಹನಗಳು ಹಗಲು-ರಾತ್ರಿ ನಿರಂತರವಾಗಿ ಈ ರಸ್ತೆಯಲ್ಲಿ ಸಂಚರಿಸುತ್ತಿವೆ. ಇದರಿಂದ ರಸ್ತೆಗಳು ಹಾಳಾಗುವುದರ ಜೊತೆಗೆ ಸಾರ್ವಜನಿಕರು, ವಿದ್ಯಾರ್ಥಿಗಳು ಹಾಗೂ ವಾಹನ ಸವಾರರು ನಿತ್ಯ ಸಂಚಾರ ದಟ್ಟಣೆಯಲ್ಲಿ ಸಿಲುಕುವಂತಾಗಿದೆ ಎಂದು ದೂರಿದರು.

ಜಿಲ್ಲಾಸ್ಪತ್ರೆ, ಪ್ರಾದೇಶಿಕ ಸಾರಿಗೆ ಕಚೇರಿ ಹಾಗೂ ಅಂಜುಮನ್ ಕಾಲೇಜು ಸೇರಿದಂತೆ ಪ್ರಮುಖ ಸಂಸ್ಥೆಗಳು ಇದೇ ರಸ್ತೆಯಲ್ಲಿದ್ದು, ಅನೇಕ ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆಯೂ ಇದಾಗಿದೆ. ಪ್ರತಿಭಟನೆ ನಡೆದ ದಿನವೇ ಟ್ರಾಫಿಕ್‌ನಲ್ಲಿ ಸಿಲುಕಿದ್ದ ಆಂಬುಲೆನ್ಸ್‌ನಲ್ಲಿದ್ದ ರೋಗಿ ತೀವ್ರ ತೊಂದರೆ ಅನುಭವಿಸಿದ ಘಟನೆ ಕಣ್ಣಾರೆ ಕಂಡಿದ್ದೇವೆ. ಇಂತಹ ಪರಿಸ್ಥಿತಿಯಲ್ಲಿ ಏನಾದರೂ ಅನಾಹುತ ಸಂಭವಿಸಿದರೆ ಅದಕ್ಕೆ ಯಾರು ಹೊಣೆ ಎಂದು ಪ್ರಶ್ನಿಸಿದರು.

ಭಾರಿ ಗಾತ್ರದ ವಾಹನಗಳಿಗೆ ಪ್ರತ್ಯೇಕ ರಸ್ತೆ ವ್ಯವಸ್ಥೆ ಕಲ್ಪಿಸಿ, ಸಾರ್ವಜನಿಕ ರಸ್ತೆಯಲ್ಲಿ ಸಂಚಾರಕ್ಕೆ ನಿರ್ಬಂಧ ಹೇರಬೇಕು. ಅಲ್ಲದೆ ಎಚ್.ಪಿ. ಪೆಟ್ರೋಲ್ ಬಂಕ್ ಎದುರಿನ ರಸ್ತೆ ಡಿವೈಡರ್ ತೆರವುಗೊಳಿಸಿ ಹಾನಿಗೊಳಿಸಿರುವ ಕುರಿತು ತನಿಖೆ ನಡೆಸಿ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಈ ಬೇಡಿಕೆಗಳನ್ನು ತಕ್ಷಣ ಈಡೇರಿಸದಿದ್ದರೆ ಗದಗಮುಳಗುಂದಲಕ್ಷ್ಮೇಶ್ವರ ರಸ್ತೆಯಲ್ಲಿ ರಸ್ತೆ ತಡೆ ನಡೆಸಿ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಕರವೇ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್. ಅಬ್ಬಿಗೇರಿ ಎಚ್ಚರಿಕೆ ನೀಡಿದರು.

ಪ್ರತಿಭಟನೆಯಲ್ಲಿ ಮಾರುತಿ ಈಳಗೇರ, ಕುಮಾರ ರೇವಣ್ಣವರ, ಸಮೀರ್ ಬಾಳಿಕಾಯಿ, ವಿನಾಯಕ ಬಡಿ, ದಾವಲಸಾಬ ತಹಶೀಲ್ದಾರ, ಶಿರಾಜ್ ಹೊಸಮನಿ, ಯೂನಸ್ ಗದಗ, ಸುಲೇಮಾನ ಮಂಜಲಾಪುರ, ತೌಸಿಫ್ ಢಾಲಾಯತ್, ಕೃಷ್ಣಾ ಲಮಾಣಿ ಸೇರಿದಂತೆ ಕರವೇ ಕಾರ್ಯಕರ್ತರು ಪಾಲ್ಗೊಂಡಿದ್ದರು.

# ಹೊಲಕ್ಕೆ ಭೇಟಿ ನೀಡಿ ರೈತರ ಅಹವಾಲು ಆಲಿಸಿದ ಡಿಸಿ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ವಿಜಯನಗರ ಜಿಲ್ಲೆಯಲ್ಲಿ ಮಳೆ ಕೊರತೆಯಿಂದ ಬೆಳೆಗಳು ಬಾಡುತ್ತಿರುವ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಕವಿತಾ ಮನ್ನಿಕೇರಿ ಅವರು ಮಂಗಳವಾರ ಹಗರಿಬೊಮ್ಮನಹಳ್ಳಿ ತಾಲೂಕಿನ ವಿವಿಧ ಗ್ರಾಮಗಳ ಹೊಲಗಳಿಗೆ ಭೇಟಿ ನೀಡಿ ಬೆಳೆಗಳ ಸ್ಥಿತಿಗತಿಯನ್ನು ಪರಿಶೀಲಿಸಿ, ರೈತರ ಸಮಸ್ಯೆಗಳನ್ನು ಆಲಿಸಿದರು.

ಹೊಸಪೇಟೆಯಿಂದ ಬೆಳಿಗ್ಗೆ ಪ್ರವಾಸ ಆರಂಭಿಸಿದ ಜಿಲ್ಲಾಧಿಕಾರಿಗಳು ನಂದಿಬಂಡಿ, ಹಂಪಾಪಟ್ಟಣ, ರಾರಾಳ ತಾಂಡಾ, ಆನೆಕಲ್ಲು ಹಾಗೂ ಮಾದೂರು ಗ್ರಾಮಗಳ ವ್ಯಾಪ್ತಿಯ ಮೆಕ್ಕೆಜೋಳ, ಹೈಬ್ರಿಡ್ ಜೋಳ, ಶೇಂಗಾ, ಕಬ್ಬು ಸೇರಿದಂತೆ ವಿವಿಧ ಬೆಳೆಗಳನ್ನು ವೀಕ್ಷಿಸಿದರು. ಮಳೆ ಅಭಾವದಿಂದ ಬೆಳೆಗಳು ಒಣಗುತ್ತಿರುವುದು ಹಾಗೂ ಕೆಲ ರೈತರು ಇನ್ನೂ ಬಿತ್ತನೆ ಮಾಡದೆ ಬೀಜ ಮತ್ತು ಗೊಬ್ಬರವನ್ನು ಮನೆಯಲ್ಲೇ ಸಂಗ್ರಹಿಸಿರುವ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದರು.

ಬೆಳೆಗಳ ವಾಸ್ತವ ಸ್ಥಿತಿಯನ್ನು ಪರಿಶೀಲಿಸಿ ಸರ್ಕಾರಕ್ಕೆ ವರದಿ ಸಲ್ಲಿಸುವ ಉದ್ದೇಶದಿಂದ ಬೆಳೆ ಸಮೀಕ್ಷೆ ಕೈಗೊಳ್ಳಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದರು.

ಈ ವೇಳೆ ರೈತರು ತಮ್ಮ ಅಳಲು ತೋಡಿಕೊಂಡರು. ಸಾಲ ಮಾಡಿ ಬೀಜ ಹಾಗೂ ಗೊಬ್ಬರ ಖರೀದಿಸಿದ್ದರೂ ಮಳೆ ಇಲ್ಲದೆ ಬೆಳೆಗಳು ಬಾಡುತ್ತಿವೆ. ಈ ಬಾರಿ ಕೈಗೆ ಬೆಳೆ ಸಿಗುವ ನಿರೀಕ್ಷೆಯೇ ಇಲ್ಲದಂತಾಗಿದೆ. ಸರ್ಕಾರ ತಕ್ಷಣ ಪರಿಹಾರ ಘೋಷಿಸಿ ರೈತರ ನೆರವಿಗೆ ಬರಬೇಕು ಎಂದು ಒತ್ತಾಯಿಸಿದರು.

ಜಿಲ್ಲಾಧಿಕಾರಿಗಳೊಂದಿಗೆ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಅಕ್ರಮ್ ಪಾಷಾ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್, ಉಪ ಕೃಷಿ ನಿರ್ದೇಶಕ ವಾಮದೇವ್, ತಹಶೀಲ್ದಾರ್ ಆರ್. ಕವಿತಾ, ತಾಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಪಿ. ವಿಶ್ವನಾಥ್, ಕೃಷಿ ಅಧಿಕಾರಿ ಎಸ್.ವಿ. ಪಾಟೀಲ್, ಅಧಿಕಾರಿಗಳಾದ ಭೋಜ ನಾಯ್ಕ್, ಶಶಿಕುಮಾರ್, ರೈತರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> **ಕನ್ನಿಹಳ್ಳಿ ಗ್ರಾಮದಲ್ಲಿ ಈರುಳ್ಳಿ ಬೆಳೆ ಹಾನಿಗೊಳಗಾದ ಜಮೀನುಗಳನ್ನು ಪರಿಶೀಲಿಸಿದ್ದೇನೆ. ಬೆಳೆ ಹಾನಿಯ ಸಮಗ್ರ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು.**
> - **ಕವಿತಾ ಮನ್ನಿಕೇರಿ, ಜಿಲ್ಲಾಧಿಕಾರಿ, ವಿಜಯನಗರ ಜಿಲ್ಲೆ**

### ಶ್ರೀ ಕರಿಯಮ್ಮದೇವಿ ಪೂರ್ವ ಪ್ರಾಥಮಿಕ ಶಾಲೆಯಲ್ಲಿ ಪಾಲಕರ ಸಭೆ, ಶೈಕ್ಷಣಿಕ ಚಿಂತನೆ ಕಾರ್ಯಕ್ರಮ

# ಸಂಸ್ಕಾರಯುತ ಶಿಕ್ಷಣಕ್ಕೆ ಪಾಲಕರ ಸಹಕಾರ ಅಗತ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳ ಕೈಯಲ್ಲಿ ಮೊಬೈಲ್ ಬದಲು ಪುಸ್ತಕ ಇರಬೇಕು. ಬಾಲ್ಯದಿಂದಲೇ ಓದುವ ಹಾಗೂ ಬರೆಯುವ ಹವ್ಯಾಸ ಬೆಳೆಸಿದಾಗ ಮಾತ್ರ ಮಕ್ಕಳ ಭವಿಷ್ಯ ಉಜ್ವಲವಾಗುತ್ತದೆ. ಸಂಸ್ಕಾರಯುತ ಶಿಕ್ಷಣ ನೀಡುವಲ್ಲಿ ಪಾಲಕರು ಮತ್ತು ಶಿಕ್ಷಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಕರಿಯಮ್ಮನ ಕಲ್ಲು ಬಡಾವಣೆ ಸುಧಾರಣಾ ಸಮಿತಿ ಕಾರ್ಯದರ್ಶಿ ಸಿ.ಕೆ. ಮಾಳಶೆಟ್ಟಿ ಹೇಳಿದರು. ನಗರದ ಶ್ರೀ ಕರಿಯಮ್ಮದೇವಿ ಪೂರ್ವ ಪ್ರಾಥಮಿಕ ಶಾಲೆಯಲ್ಲಿ 2026-27ನೇ ಶೈಕ್ಷಣಿಕ ವರ್ಷದ ಅಂಗವಾಗಿ ಆಯೋಜಿಸಿದ್ದ ಪಾಲಕರ ಸಭೆ ಹಾಗೂ ಶೈಕ್ಷಣಿಕ ಚಿಂತನೆ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಅವರು ಮಾತನಾಡಿದರು.

ತಾಯಿ ಮಗುವಿನ ಹೃದಯವಾಗಿದ್ದರೆ, ತಂದೆ ಮಗುವಿನ ಮೆದುಳಿನಂತೆ ಮಾರ್ಗದರ್ಶನ ನೀಡಬೇಕು. ಶಿಕ್ಷಕರು ದಾರಿದೀಪವಾಗಿ ಶಿಕ್ಷಣವನ್ನು ಹರಿಯುವ ನೀರಿನಂತೆ, ಉರಿಯುವ ಪಣತಿಯಂತೆ ಬೆಳಗಿಸಬೇಕು. ಮಕ್ಕಳ ಭವಿಷ್ಯ ರೂಪಿಸುವ ಜವಾಬ್ದಾರಿ ಪಾಲಕರು ಮತ್ತು ಶಿಕ್ಷಕರ ಮೇಲಿದೆ ಎಂದು ಹೇಳಿದರು. ಉಪನ್ಯಾಸಕರಾದ ಪ್ರವೀಣಕುಮಾರ ಕನ್ಯಾಳ ಹಾಗೂ ಮಂಜುಳಾ ಕೊಪ್ಪದ ಅವರು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಸಂಬಂಧಿಸಿದಂತೆ ಪಾಲಕರಿಗೆ ಸಲಹೆ-ಸೂಚನೆಗಳನ್ನು ನೀಡಿದರು.

ಸಭೆಯಲ್ಲಿ ಪಾಲಕರ ಪ್ರತಿನಿಧಿಯಾಗಿ ಶೋಭಾ ಸಕ್ಕರಗೌಡ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಶಾಲಾ ಸುಧಾರಣಾ ಸಮಿತಿಯ ಸದಸ್ಯ ಜಗದೀಶ ಎಸ್. ಪೂಜಾರ ಅವರು ಪೆನ್ಸಿಲ್ ನೀಡಿ ಅತಿಥಿಗಳನ್ನು ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು.

ಶಾಲಾ ಸುಧಾರಣಾ ಸಮಿತಿಯ ಪ್ರಧಾನ ಕಾರ್ಯದರ್ಶಿ ಜೆ.ಬಿ. ಗಾರವಾಡ ಮಾತನಾಡಿ, ಶಾಲೆಯನ್ನು ಆಕರ್ಷಣೀಯ ಶಿಕ್ಷಣ ಕೇಂದ್ರವನ್ನಾಗಿ ರೂಪಿಸಲು ಹಾಗೂ ಪಾಲಕರ ಸಲಹೆಗಳನ್ನು ಅಳವಡಿಸಿಕೊಂಡು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka